ಸಂಪುಟ : 11 ಸಂಚಿಕೆ: 16 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 12 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...


VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 16 Pages : 4+2 Price : 3.00 Thursday February 12 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಗದಗ ಗ್ರಾಮೀಣ ಬಿಇಒ ಮನವಿಗೆ ವ್ಯಾಪಕ ಮೆಚ್ಚುಗೆ । ರಾಜ್ಯದ ಗಮನ ಸೆಳೆಯುತ್ತಿದೆ ಜಿಲ್ಲೆಯ ಕ್ರಮ**

# ಫಲಿತಾಂಶ ಸುಧಾರಣೆಗೆ ಕ್ರಾಂತಿಕಾರಿ ಕ್ರಮ!


ಕರ್ನಾಟಕ ಸರ್ಕಾರ
ತಾಲೂಕ ಪಂಚಾಯತ ಕಾರ್ಯಾಲಯ, ಗದಗ ತಾಲೂಕ–582101
ಸಂಖ್ಯೆ: ತಾ.ಪಂ.ಗ/ಪರೀಕ್ಷೆ/ಡಂಗುರು/2025–26 ದಿನಾಂಕ: 03/02/2026

ಗೆ,
ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳ,
ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ

ವಿಷಯ: ಗ್ರಾಮಗಳಲ್ಲಿ ಸಾಯಂಕಾಲ 7.00 ಗಂಟೆಯಿಂದ 9.00 ಗಂಟೆವರೆಗೆ ಮೊಬೈಲ್ ಮತ್ತು ಟಿ.ವ್ಹಿಗಳನ್ನು ಸ್ವಿಚ್ ಆಫ್ ಮಾಡುವಂತೆ ಮತ್ತು ಟ್ರ್ಯಾಕ್ಟರಗಳಲ್ಲಿ ಜೋರಾಗಿ ಹಾಡು ಹಾಕಿಕೊಂಡು ಓಡಾಡದೇ ಇರುವ ಕುರಿತು ಡಂಗರು ಸಾರಿಸುವ ಕುರಿತು.

ಉಲ್ಲೇಖ: ಕ್ಷೇತ್ರ ಶಿಕ್ಷಣಾಧಿಕಾರಿಗಳು, ಗದಗ ಗ್ರಾಮೀಣ ವಲಯ ಇವರ ಪತ್ರ ದಿನಾಂಕ: 02/02/2026

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮಗಳಲ್ಲಿ ಸಾಯಂಕಾಲ 7.00 ಗಂಟೆಯಿಂದ 9.00 ಗಂಟೆವರೆಗೆ ಮೊಬೈಲ್ ಮತ್ತು ಟಿವಿ ಗಳನ್ನು ಸ್ವಿಚ್ ಆಫ್ ಮಾಡುವಂತೆ ಮತ್ತು ಟ್ರ್ಯಾಕ್ಟರಗಳಲ್ಲಿ ಜೋರಾಗಿ ಹಾಡು ಹಾಕಿಕೊಂಡು ಓಡಾಡದೇ ಇರುವ ಕುರಿತು ಡಂಗರು ಸಾರಿಸುವ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಗದಗ ಗ್ರಾಮೀಣ ರವರು ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿರುತ್ತಾರೆ.

ನಿಮಗೆ ಸಂಬಂಧಿಸಿದ ಗ್ರಾಮಗಳಲ್ಲಿ ಮಕ್ಕಳು ಓದುವ ದೃಷ್ಟಿಯಿಂದ ಮತ್ತು ಎಸ್.ಎಸ್.ಎಲ್.ಸಿ ಮಕ್ಕಳ ಫಲಿತಾಂಶ ಸುಧಾರಣೆಯ ದೃಷ್ಟಿಯಿಂದ ಸಾಯಂಕಾಲ 7.00 ಗಂಟೆಯಿಂದ 9.00 ಗಂಟೆವರೆಗೆ ಮೊಬೈಲ್ ಮತ್ತು ಟಿವ್ಹಿಗಳನ್ನು ಸ್ವಿಚ್ ಆಫ್ ಮಾಡುವಂತೆ ಮತ್ತು ಟ್ರ್ಯಾಕ್ಟರಗಳಲ್ಲಿ ಜೋರಾಗಿ ಹಾಡು ಹಾಕಿಕೊಂಡು ಓಡಾಡದೇ ಇರುವ ಕುರಿತು ಡಂಗರು ಸಾರಿಸಲು ಕ್ರಮವಹಿಸಿ ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಲು ಸೂಚಿಸಿದೆ.

ಕಾರ್ಯನಿರ್ವಾಹಕ ಅಧಿಕಾರಿಗಳು
ತಾಲೂಕ ಪಂಚಾಯತ್ ಗದಗ.

ಪ್ರತಿಯನ್ನು:-
ಕ್ಷೇತ್ರ ಶಿಕ್ಷಣಾಧಿಕಾರಿಗಳು, ಗದಗ ಗ್ರಾಮೀಣ ಇವರಿಗೆ ಮಾಹಿತಿಗಾಗಿ.

■ ವಿಜಯಸಾಕ್ಷಿ ಸುದ್ದಿ, ಗದಗ

ಪರೀಕ್ಷಾ ಸಮಯ ಹತ್ತಿರವಾಗುತ್ತಿದ್ದಂತೆ ಮಕ್ಕಳ ಓದಿಗೆ ಅಡ್ಡಿಯಾಗುತ್ತಿರುವ ಮೊಬೈಲ್ ಮತ್ತು ಟಿವಿಗಳನ್ನು ನಿಯಂತ್ರಿಸಲು ಗದಗ ತಾಲೂಕು ಪಂಚಾಯಿತಿ ಕೈಗೊಂಡ ಕ್ರಮವೊಂದು ಈಗ ರಾಜ್ಯದ ಗಮನ ಸೆಳೆಯುತ್ತಿದೆ.

ಗದಗ ತಾಲೂಕಿನ ಎಲ್ಲ ಗ್ರಾಮಗಳಲ್ಲಿ ಸಂಜೆ 7ರಿಂದ ರಾತ್ರಿ 9ರವರೆಗೆ ಪ್ರತಿಯೊಬ್ಬರೂ ತಮ್ಮ ಮೊಬೈಲ್ ಮತ್ತು ಟಿವಿಗಳನ್ನು ಸ್ವಿಚ್ ಆಫ್ ಮಾಡಬೇಕು. ಅಷ್ಟೇ ಅಲ್ಲದೆ, ಗ್ರಾಮದ ಬೀದಿಗಳಲ್ಲಿ ಟ್ರ್ಯಾಕ್ಟರ್‌ಗಳಲ್ಲಿ ಜೋರಾಗಿ ಹಾಡು ಹಾಕಿಕೊಂಡು ಓಡಾಡುವುದನ್ನು ನಿಷೇಧಿಸಿ ಡಂಗುರ ಸಾರುವಂತೆ ಗದಗ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಎಲ್ಲ ಪಿಡಿಒಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿರುವುದಕ್ಕೆ ವ್ಯಾಪಕ ಪ್ರಶಂಸೆ ವ್ಯಕ್ತವಾಗುತ್ತಿದೆ.

ಈ ಕ್ರಾಂತಿಕಾರಿ ಸೂಚನೆಗೆ ನಾಂದಿ ಹಾಡಿದ್ದು ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆ ಮತ್ತು ಮಕ್ಕಳ ಏಕಾಗ್ರತೆ



ಹೆಚ್ಚಿಸಲು ಪೋಷಕರಲ್ಲಿ ಶಿಸ್ತು ಮೂಡಿಸುವುದು ಅನಿವಾರ್ಯ ಎಂಬ ದೂರದೃಷ್ಟಿಯೊಂದಿಗೆ ಅವರು ನೀಡಿದ ವಿನಂತಿ ಪತ್ರವನ್ನು ಆಧರಿಸಿ, ತಾ.ಪಂ ಇಒ ಈ ಸೂಚನೆ ನೀಡಿದ್ದಾರೆ. ಶಿಕ್ಷಣಾಧಿಕಾರಿಗಳ ಈ ಸಂವೇದನಾಶೀಲ ನಿರ್ಧಾರಕ್ಕೆ ಶೈಕ್ಷಣಿಕ ವಲಯದಲ್ಲಿ ವ್ಯಾಪಕ ಬೆಂಬಲ ವ್ಯಕ್ತವಾಗುತ್ತಿದೆ.

ಹಳ್ಳಿಗಳಲ್ಲಿ ಮೊಬೈಲ್‌ನಿಂದ ವಿದ್ಯಾರ್ಥಿಗಳು ಕೆಲಕಾಲ ದೂರ ಉಳಿಯಲಿ ಎನ್ನುವ



ಉದ್ದೇಶದಿಂದ ಮೊಟ್ಟ ಮೊದಲ ಬಾರಿಗೆ ಮಹಾರಾಷ್ಟ್ರದ ಸಾಂಗ್ಲಿ ಸಮೀಪದ ಮೋಹಿತೆ ವಡ್ಗಾಂವ್ ಗ್ರಾಮದಲ್ಲಿ 'ಸೈರನ್' ಪದ್ಧತಿ ಜಾರಿಗೆ ಬಂದಿತು. ಅದಾದ ನಂತರ ದಕ್ಷಿಣ ಕನ್ನಡ ಕೆಲ ಗ್ರಾಮ ಪಂಚಾಯಿತಿ ಮಟ್ಟದಲ್ಲಿ 'ಫೋನ್ ಬಿಡಿ ಓದಿಗೆ ಸಮಯ ಕೊಡಿ' ಎಂಬ ಅಭಿಯಾನಗಳು ನಡೆದಿದ್ದವು. ಈಚೆಗಷ್ಟೆ ಬೆಳಗಾವಿ ಜಿಲ್ಲೆಯ ಕೆಲ ಹಳ್ಳಿಗಳಲ್ಲಿ ಸ್ವಯಂಪ್ರೇರಿತವಾಗಿ ಜನರು ಸಂಜೆ ವೇಳೆ ಟಿವಿ ಬಂದ್ ಮಾಡಿ ಮಕ್ಕಳಿಗೆ ಓದಿಸಲು ಸಹಕರಿಸುತ್ತಿದ್ದಾರೆ.

ಆದರೆ, ಸರ್ಕಾರಿ ಮಟ್ಟದಲ್ಲಿ ಅಧಿಕೃತವಾಗಿ ಡಂಗುರ ಸಾರಿಸಿ, ಮೊಬೈಲ್, ಟಿವಿನಿಂದ ಎರಡು ಗಂಟೆ ದೂರ ಇರುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಮುಂದಾಗಿರುವುದು ಗದಗ ಜಿಲ್ಲೆಯ ವಿಶೇಷತೆ.

ಗದಗ ತಾಲೂಕು ಪಂಚಾಯಿತಿ ಇಒ ಹೊರಡಿಸಿರುವ ಈ ಆದೇಶದ ಪ್ರತಿ ಸಾಮಾಜಿಕ ಜಾಲತಾಣಗಳಲ್ಲಿ ಸದ್ದು ಮಾಡುತ್ತಿದೆ. ಗದಗ ಬಿಇಒ ಅವರ ಈ ಕಾರ್ಯ ಇತರ ಜಿಲ್ಲೆಗಳಿಗೂ ಮಾದರಿಯಾಗಲಿ ಎಂಬ ಒತ್ತಾಯ ಕೇಳಿಬರುತ್ತಿದೆ. ಒಂದು ವೇಳೆ ಈ ಪ್ರಯೋಗ ಗದಗದಲ್ಲಿ ಯಶಸ್ವಿಯಾದರೆ, ಮುಂಬರುವ ದಿನಗಳಲ್ಲಿ ಇಡೀ ರಾಜ್ಯಕ್ಕೆ ಇದು ಪಸರಿಸುವುದರಲ್ಲಿ ಅನುಮಾನವಿಲ್ಲ ಎನ್ನುತ್ತಾ ಗದಗ ಗ್ರಾಮೀಣ ವಲಯದ ಶಿಕ್ಷಕರು.

> ಕೇವಲ ಶಾಲೆಗಳಲ್ಲಿ ಶಿಕ್ಷಕರು ಪಾಠ ಮಾಡಿದರೆ ಸಾಲದು, ಮನೆಯಲ್ಲಿಯೂ ಪೂರಕ ವಾತಾವರಣ ಇರಬೇಕು. ಸಂಜೆಯ ಎರಡು ಗಂಟೆಗಳ ಕಾಲ ಡಿಜಿಟಲ್ ಉಪವಾಸ ಮಾಡುವುದರಿಂದ ಮಕ್ಕಳಲ್ಲಿ ಓದಿನ ಆಸಕ್ತಿ ಹೆಚ್ಚುವುದರ ಜೊತೆಗೆ ಪೋಷಕರು ಮತ್ತು ಮಕ್ಕಳ ನಡುವಿನ ಸಂಬಂಧವೂ ಸುಧಾರಿಸಲಿದೆ ಎನ್ನುವ ಉದ್ದೇಶದಿಂದ ತಾ.ಪಂ ಇಒ ಅವರಿಗೆ ಮನವಿ ಮಾಡಿಕೊಂಡಿದೆ. ಮನವಿಗೆ ತಕ್ಷಣ ಸ್ಪಂದಿಸಿ, ಎಲ್ಲ ಪಿಡಿಒಗಳಿಗೆ ಸೂಚನೆ ನೀಡುವ ಮೂಲಕ ಶೈಕ್ಷಣಿಕ ಕಾಳಜಿ ಮೆರೆದಿದ್ದಾರೆ.
>
> **– ವಿ.ವಿ. ನಡುವಿನಮನಿ.**
> ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ.


> ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿನಂತಿ ಮೇರೆಗೆ ಫೆ. 3ರಂದು ಎಲ್ಲ ಪಿಡಿಒಗಳಿಗೆ ಪತ್ರ ಬರೆಯಲಾಗಿದೆ. ಕಸ ವಿಲೇವಾರಿ ವಾಹನದ ಮೂಲಕ ಎರಡು ಗಂಟೆ ಮೊಬೈಲ್, ಟಿವಿಯಿಂದ ದೂರ ಉಳಿಯುವಂತೆ ಡಂಗುರ ಸಾರಲಾಗಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಈ ಬಗ್ಗೆ ಇನ್ನಷ್ಟು ಗಂಭೀರ ಕ್ರಮಗಳನ್ನು ಕೈಗೊಳ್ಳುವ ಚಿಂತನೆ ಮೂಡಿದೆ.
>
> **– ಮಲ್ಲಯ್ಯ ಕೊರವನವರ.**
> ತಾ.ಪಂ ಇಒ, ಗದಗ.

**ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಜಿ.ಎಸ್. ಪಾಟೀಲ**

## ಅಭಿವೃದ್ಧಿ ಕಾರ್ಯಗಳಲ್ಲಿ ಹಿನ್ನಡೆಯಾಗದಂತೆ ನಿಗಾ ವಹಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕು ಸೇರಿದಂತೆ ಮತಕ್ಷೇತ್ರದಾದ್ಯಂತ ಪ್ರತಿ ಗ್ರಾಮಗಳಿಗೂ ಅನುದಾನವನ್ನು ನೀಡಲಾಗಿದ್ದು, ಸಮರ್ಪಕವಾಗಿ ಕೆಲಸಗಳಾಗುತ್ತಿಲ್ಲ ಎಂಬ ಮಾತುಗಳು ಕೇಳಿಬರುತ್ತಿವೆ. ಅನುದಾನದ ಲಭ್ಯತೆಯಿದ್ದರೂ ಸಹ ಅಭಿವೃದ್ಧಿ ಕಾರ್ಯಗಳು ಏಕೆ ನಿಧಾನಗತಿಯಲ್ಲಿ ಸಾಗುತ್ತಿವೆ ಎಂದು ಶಾಸಕ ಜಿ.ಎಸ್. ಪಾಟೀಲ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.




ಅವರು ಬುಧವಾರ ತಾ.ಪಂ ಸಭಾಭವನದಲ್ಲಿ ಜರುಗಿದ ಮತಕ್ಷೇತ್ರದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿ.ಪಂ, ಪಿಡಬ್ಲುಡಿ, ಆರ್‌ಡಬ್ಲುಎಸ್ ಇಲಾಖೆಗಳಿಗೆ ಅನುದಾನವನ್ನು ಒದಗಿಸಲಾಗಿದೆ. ಆದರೆ ಗ್ರಾಮೀಣ ಭಾಗಗಳಲ್ಲಿ ಸಿಸಿ ರಸ್ತೆ, ಚರಂಡಿ ನಿರ್ಮಾಣ ಸೇರಿದಂತೆ ಅನೇಕ ಕಾಮಗಾರಿಗಳು ನಿಧಾನಗತಿಯಲ್ಲಿ ಸಾಗಿದ್ದು, ಇದನ್ನು ಸಹಿಸಲು ಸಾಧ್ಯವಿಲ್ಲ. ಹಿರಿಯ ಅಧಿಕಾರಿಗಳು ಅಭಿವೃದ್ಧಿ ಕಾರ್ಯಗಳು ನಡೆದಿರುವ ಸ್ಥಳಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಂದಾಗ ಮಾತ್ರ ಅಭಿವೃದ್ಧಿ ಕಾರ್ಯಗಳು ಭರದಿಂದ ಸಾಗಲು ಸಾಧ್ಯ ಎಂದರು.

ಗ್ರಾಮೀಣ ಭಾಗಗಳ ರಸ್ತೆಗಳು ಸೇರಿದಂತೆ ಮುಖ್ಯ ರಸ್ತೆಗಳು ಅತಿಯಾದ ಮಳೆಯಿಂದ ಹಾಳಾಗಿದ್ದು, ಅವುಗಳನ್ನು ದುರಸ್ತಿಗೊಳಿಸಿ ಎಂದು ಎರಡು ತಿಂಗಳ ಹಿಂದೆಯೇ ಸೂಚಿಸಲಾಗಿತ್ತು. ಆದರೆ ಈಗ ಕೆಲಸ ಆರಂಭಿಸಿದ್ದೀರಿ. ಈ ರೀತಿ ಅಭಿವೃದ್ಧಿ ಕಾರ್ಯಗಳನ್ನು ಮಾಡುವುದಾದರೆ ನೀವು ನಮಗೆ ಬೇಡ ಎಂದು ಕೆಲ ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಶಾಸಕರು, ಬೇಗನೆ ಎಲ್ಲ ಕೆಲಸಗಳು ಮುಗಿಯಬೇಕು. ಇಲ್ಲದಿದ್ದರೆ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಲಕ್ಕಲಕಟ್ಟಿ, ನಾಗೇಂದ್ರಗಡ, ಹರ್ಲಾಪೂರ, ಉಮಚಗಿ, ನಾರಯಣಪೂರ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಸಿಸಿ ರಸ್ತೆಗಳ ನಿರ್ಮಾಣ ಕಾರ್ಯ ನಿಧಾನಗತಿಯಲ್ಲಿ ನಡೆದಿದ್ದು, ಈ ವಿಷಯ ನಿಮ್ಮ ಗಮನಕ್ಕೆ ಬಂದಿಲ್ಲವೇ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಕ ಅಭಿಯಂತರ ಆರ್.ಎನ್. ಪುರೋಹಿತರನ್ನು ಪ್ರಶ್ನಿಸಿದ ಶಾಸಕರು, ಅಭಿವೃದ್ಧಿ ಕಾರ್ಯಗಳ ಬಗ್ಗೆ ನಿಷ್ಕಾಳಜಿ ವಹಿಸಬೇಡಿ ಎಂದರು.


ಇದೇ ಸಂಧರ್ಭದಲ್ಲಿ ಆರ್‌ಡಬ್ಲುಎಸ್ ಮುಖ್ಯ ಅಭಿಯಂತರ ಚಂದ್ರ ನೇರಲೆಕರವರಿಗೂ ಕುಡಿಯುವ ನೀರಿನ ತೊಂದರೆಯಾಗದಂತೆ ಮುಂಜಾಗೃತಾ ಕ್ರಮ ವಹಿಸಿ ಎಂದು ಸೂಚಿಸಿದರು. ನಂತರ ಅವರು ವಿವಿಧ ಇಲಾಖೆಗಳ ಪ್ರಗತಿಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಸಭೆಯಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷರುಗಳಾದ ಸಂಗನಗೌಡ ಪಾಟೀಲ, ಶರಣಪ್ಪ ಬೆಟಗೇರಿ, ರೋಣ, ಗಜೇಂದ್ರಗಡ, ಮುಂಡರಗಿ, ಗದಗ ತಾ.ಪಂ ಇಒಗಳು ಹಾಗೂ ವಿವಿದ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಮತಕ್ಷೇತ್ರದಲ್ಲಿ ವಿವಿಧ ಗ್ರಾಮಗಳಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಗೊಂಡಿದೆ. ಅವುಗಳಿಗೆ ಶೀಘ್ರವೇ ಚಾಲನೆ ನೀಡಿ. ಇನ್ನು ಪಿಎಂಜಿಎಸ್‌ಆರ್‌ವಾಯ್ ಯೋಜನೆಯಡಿಯಲ್ಲಿ ರಸ್ತೆ ಕಾಮಗಾರಿಗಳಿಗೆ ಅನುಮತಿ ದೊರತಿದ್ದು, ಅಧಿಕಾರಿಗಳು ಎಲ್ಲ ಕಾಮಗಾರಿಗಳ ಪ್ರಗತಿಗೆ ಶ್ರಮಿಸಬೇಕು. ಮಾರನಬಸರಿ ಗ್ರಾಮಕ್ಕೆ ಮತ್ತೆ 35 ಲಕ್ಷ ರೂಗಳ ಅನುದಾನವನ್ನು ನೀಡಲಾಗಿದ್ದು, ಶೀಘ್ರವೇ ಕಾಮಗಾರಿ ಆರಂಭಿಸಿ.
>
> **– ಜಿ.ಎಸ್. ಪಾಟೀಲ.**
> ಶಾಸಕರು.

**ಗೃಹಲಕ್ಷ್ಮೀ ಯೋಜನೆಯ ಗದಗ ಜಿಲ್ಲಾ ಪ್ರಗತಿ ವಿಮರ್ಶೆ; 650 ಫಲಾನುಭವಿಗಳಿಗೆ ಶೀಘ್ರ ಸೌಲಭ್ಯ ಕಲ್ಪಿಸಲು ನಿರ್ದೇಶನ**

## ತಾಂತ್ರಿಕ ಸಮಸ್ಯೆ ಇತ್ಯರ್ಥಕ್ಕೆ ಸಚಿವರ ಸೂಚನೆ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗೃಹಲಕ್ಷ್ಮೀ ಯೋಜನೆಯ ಅನುಷ್ಠಾನ ಪ್ರಗತಿಯಲ್ಲಿ ಇರುವ ತಾಂತ್ರಿಕ ಸಮಸ್ಯೆಗಳ ಪರಿಹಾರ ಕಾರ್ಯವನ್ನು ವೇಗಗೊಳಿಸಲು ಸಚಿವ ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬೆಂಗಳೂರಿನ ವಿಧಾನಸಭೆ ಸಚಿವರ ಕಾರ್ಯಾಲಯದ ಸಭಾಂಗಣದಲ್ಲಿ ಬುಧವಾರ ನಡೆದ ಗದಗ ಜಿಲ್ಲೆಯ ಗ್ಯಾರಂಟಿ ಯೋಜನೆಗಳಲ್ಲಿಲೊಂದಾದ ಗೃಹಲಕ್ಷ್ಮೀ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಆದಾಯ ತೆರಿಗೆ ಹಾಗೂ ಜಿಎಸ್‌ಟಿ ಪಾವತಿದಾರರ ಒಟ್ಟು ಸಂಖ್ಯೆ 2543 ಎಂದು ಸಭೆಯಲ್ಲಿ ಅಧಿಕಾರಿಗಳು ತಿಳಿಸಿದರು. ಗೃಹಲಕ್ಷ್ಮೀ ಯೋಜನೆ ಪ ಡ ಂ ೦ ು ು ಲ ು ▸▸ 3ನೇ ಪುಟಕ್ಕೆ




## ಬಸ್ ನಿಲ್ದಾಣದಲ್ಲಿ ಮಾಂಗಲ್ಯ ಸರ ಕಳ್ಳತನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಸ್ ನಿಲ್ದಾಣದಲ್ಲಿ ಬುಧವಾರ ಸಂಜೆ 4ರ ವೇಳೆಗೆ ಏಕಕಾಲಕ್ಕೆ ದುಷ್ಕರ್ಮಿಗಳು/ಕಳ್ಳಿಯರ ಗ್ಯಾಂಗ್ ನಾಲ್ಕೈದು ಮಹಿಳೆಯರ ಮಾಂಗಲ್ಯ ಸರ ಕದ್ದು ಪರಾರಿಯಾದ ಘಟನೆ ಜರುಗಿದೆ. ಮಾಂಗಲ್ಯ ಸರ ಕಳೆದುಕೊಂಡು ದಿಕ್ಕು ತೇ–ೋಚದಂತಾದ ಮಹಿಳೆಯರು ಅಳುತ್ತಾ ಪೊಲೀಸ್ ಠಾಣೆಯ ಮೊರೆ ಹೋಗಿದ್ದಾರೆ.

ಸಂತೆ, ಮದುವೆ ಇತರೇ ಕೆಲಸ ಕಾರ್ಯ ನಿಮಿತ್ತ ಲಕ್ಷ್ಮೇಶ್ವರಕ್ಕೆ ಬಂದ ಕಳಸ, ಬಾಲೆಹೊಸೂರ, ಹರ್ಲಾಪುರ ಗ್ರಾಮಗಳ ಅಮಾಯಕ ಮಹಿಳೆಯರು ಸಂಜೆ ಊರಿಗೆ ವಾಪಸ್ ಹೋಗಲು ಬಸ್ ಹತ್ತುವ ವೇಳೆ ಕಳ್ಳಿಯರ ಕೈ ಚಳಕಕ್ಕೆ ಬಲಿಯಾಗಿದ್ದಾರೆ.

ಸರ ಕಳೆದುಕೊಂಡ ಮಹಿಳೆಯರೆಲ್ಲರೂ ಪೊಲೀಸ್ ಠಾಣೆಗೆ ದೌಡಾಯಿಸಿ ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ. ಮಾಹಿತಿ ಪಡೆದು ಪ್ರಕರಣ ದಾಖಲಿಸಿಕೊಂಡ ಪೊಲೀಸರು ಸಿಸಿ ಕ್ಯಾಮರಾ ಪರಿಶೀಲನೆ ಮೂಲಕ ಕಳ್ಳರ ಪತ್ತೆಗೆ ಮುಂದಾಗಿದ್ದಾರೆ. ಬಸ್ ನಿಲ್ದಾಣದಲ್ಲಿ ಈ ರೀತಿ ಕಳ್ಳತನವನ್ನು ತಡೆಯುವ ನಿಟ್ಟಿನಲ್ಲಿ ಡಿಪೋದವರ 4 ಕ್ಯಾಮರಾ ಹೊರತಾಗಿ ಪೊಲೀಸ್ ಠಾಣೆಯಿಂದ 12 ಸಿಸಿ ಕ್ಯಾಮರಾ ಅಳವಡಿಸಿದ್ದರೂ ಕಳ್ಳತನದ ಘಟನೆಗಳು ನಡೆಯುತ್ತಲೇ ಇರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಶಕ್ತಿ ಯೋಜನೆ ಜಾರಿಯಾಗಿರುವುದು ಮತ್ತು ಬಂಗಾರದ ಬೆಲೆ ಗಗನಕ್ಕೇರಿರುವುದರಿಂದ ಅಂತರ್ ಜಿಲ್ಲಾ ಮಹಿಳಾ ಸರಗಳ್ಳಿಯರ ಗ್ಯಾಂಗ್‌ನವರು ತಮ್ಮ ದಂಧೆ ಹೆಚ್ಚಿಸಿಕೊಂಡಿದ್ದಾರೆನ್ನಲಾಗಿದೆ. ಈ ಬಗ್ಗೆ ಸಾರ್ವಜನಿಕರು ಜಾಗೃತರಾಗಬೇಕು ಮತ್ತು ಪೊಲೀಸರು, ಸಾರಿಗೆ ಘಟಕದವರು ಇನ್ನಷ್ಟು ಕ್ರಮ ಮತ್ತು ಜಾಗೃತಿ ಮೂಡಿಸುವ ಕಾರ್ಯ ಮಾಡಬೇಕು ಎಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

**"ಓಂ ಶ್ರೀ ಗುರು ಕೊಟ್ಟೂರೇಶ್ವರಾಯ ನಮಃ" "ಕೊಟ್ಟೂರೇಶ್ವರ ದೊರೆಯೆ, ನಿನಗ್ಯಾರು ಸರಿ"**

# ಇತಿಹಾಸ ಪ್ರಸಿದ್ಧ ಶ್ರೀ ಕೊಟ್ಟೂರು ಬಸವೇಶ್ವರರ ಮಹಾರಥೋತ್ಸವ








ವಿಜಯನಗರ ಜಿಲ್ಲೆಯ ಪ್ರಮುಖ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾದ ಕೊಟ್ಟೂರು, ಶ್ರೀ ಗುರು ಬಸವೇಶ್ವರರ ಪಾವನ ನೆಲವಾಗಿದೆ. ಬಸವೋತ್ತರ ಪರಂಪರೆಯಲ್ಲಿ ಸಾಮಾಜಿಕ ಅಸಮಾನತೆ ಮತ್ತು ಜಾತಿ ವ್ಯವಸ್ಥೆ ವಿರುದ್ಧ ಜನರನ್ನು ಎಚ್ಚರಿಸಿದ ಮಹಾನ್ ಚೇತನರಲ್ಲಿ ಕೊಟ್ಟೂರು ಗುರು ಬಸವೇಶ್ವರರು ಪ್ರಮುಖರು. ಕಾಯಕಯೋಗಿ, ಶರಣ, ಮಾನವತಾವಾದಿಯಾಗಿ ಗುರು ಬಸವೇಶ್ವರರು ಲಕ್ಷಾಂತರ ಭಕ್ತರ ಆರಾಧ್ಯ ದೈವವಾಗಿ ಆರಾಧಿಸಲ್ಪಡುತ್ತಾರೆ.

**ಇತಿಹಾಸ ಮತ್ತು ಪರಂಪರೆ** : ಒಂದು ಮೂಲದ ಪ್ರಕಾರ ಗುರು ಬಸವೇಶ್ವರರು ತಮಿಳುನಾಡಿನ ಧರ್ಮಪುರಿ ಜಿಲ್ಲೆಯ ಹೊಸೂರಿನವರು. ಅಲ್ಲಿಂದ ಎಡೆಯೂರಿಗೆ ಬಂದು ಸಿದ್ಧಲಿಂಗ ಯತಿಗಳ ಶಿಷ್ಯತ್ವ ಸ್ವೀಕರಿಸಿ, ಚಾಮರಾಜನಗರದಲ್ಲಿ ಧರ್ಮಕಾರ್ಯ ನಿರ್ವಹಿಸಿ, ನಂತರ ಹಂಪಿ ಮೂಲಕ ಕೊಟ್ಟೂರಿಗೆ ಆಗಮಿಸಿದರು ಎಂಬ ಮಾತು ಪ್ರಚಲಿತದಲ್ಲಿದೆ. ಅವರ ಕಾಲ ಕ್ರಿ.ಶ. 1580ರ ಆಸುಪಾಸು ಎಂದು ಹೇಳಲಾಗುತ್ತದೆ.

ಬಸವಲಿಂಗ ಕವಿ ರಚಿಸಿದ "ಕೊಟ್ಟೂರು ಬಸವೇಶ್ವರ ಚರಿತ್ರೆ" (1678) ಕೃತಿ ಹಾಗೂ ಬಾಲಬಸವರ "ಗೋಣಿ ಬಸವನ ಕಾವ್ಯಗಳು" ಗುರು ಬಸವೇಶ್ವರರ ಜೀವನದ ಬಗ್ಗೆ ಬೆಳಕು ಚೆಲ್ಲುತ್ತವೆ. ಒಂದು ಕಾಲದಲ್ಲಿ ಜೈನರ ಕೇಂದ್ರವಾಗಿದ್ದ ಕೊಟ್ಟೂರು, ಗುರು ಬಸವೇಶ್ವರರ ಪ್ರಭಾವದಿಂದ ಶೈವ ಪಂಥದ ಪ್ರಮುಖ ಕ್ಷೇತ್ರವಾಯಿತು.

**ಐದು ಮಠಗಳ ಮಹಿಮೆ** : ಕೊಟ್ಟೂರಿನಲ್ಲಿ ಮೂರುಕಲ್ಲು ಮಠ, ಹಿರೇಮಠ (ದರ್ಬಾರ್ ಮಠ), ತೊಟ್ಟಿಲು ಮಠ, ಗಚ್ಚಿನ ಮಠ ಹಾಗೂ ಮರಿ ಮಠಗಳಿವೆ. ಮೂರುಕಲ್ಲು ಮಠದ ಶಿಲಾಗೋಪುರಗಳು ಚಾಲುಕ್ಯ ಮತ್ತು ಹೊಯ್ಸಳ ಕಾಲದ ಶೈಲಿಯನ್ನು ನೆನಪಿಸುತ್ತವೆ.

**ರಥೋತ್ಸವದ ಅದ್ಭುತ ಕ್ಷಣ** : ಪ್ರತಿ ವರ್ಷ ಮಹಾಶಿವರಾತ್ರಿಗೆ ಸ್ವಲ್ಪ ಮೊದಲು ನಡೆಯುವ ಗುರು ಕೊಟ್ಟೂರೇಶ್ವರರ ರಥೋತ್ಸವ ಭಕ್ತರನ್ನು ದೇಶದ ನಾನಾ ಭಾಗಗಳಿಂದ ಸೆಳೆಯುತ್ತದೆ. ರಥದೊಳಗೆ ವಿಗ್ರಹವನ್ನು ಪ್ರತಿಷ್ಠಾಪಿಸಿ, ಬುಡಕಟ್ಟು ಜನರು ಗಿಣ್ಣು-ಹಾಲು ಅರ್ಪಿಸುವುದು ವಿಶೇಷ ಸಂಪ್ರದಾಯ.

"ಮೂಲ" ನಕ್ಷತ್ರ ಹೊಂದಿಕೆಯಾಗುವವರೆಗೆ ರಥ ಚಲಿಸದು ಎಂಬ ನಂಬಿಕೆ ಇದೆ. ನಕ್ಷತ್ರ ಹೊಂದಿದ ಕ್ಷಣದಲ್ಲಿ ರಥ ಸ್ವಲ್ಪ ತನ್ನಂತೆಯೇ ಚಲಿಸುವುದು ಭಕ್ತರಲ್ಲಿ ಭಕ್ತಿ ಭಾವವನ್ನು ಉಕ್ಕಿಸುತ್ತದೆ.

**ಬಳಿಕ ಭಕ್ತರು: "ಓಂ ಶ್ರೀ ಗುರು ಕೊಟ್ಟೂರೇಶ್ವರಾಯ ನಮಃ" "ಕೊಟ್ಟೂರೇಶ್ವರ ದೊರೆಯೆ, ನಿನಗ್ಯಾರು ಸರಿ "** ಎಂದು ಘೋಷಣೆಗಳೊಂದಿಗೆ ರಥವನ್ನು ಎಳೆಯುತ್ತಾರೆ.

**ಪಾದಯಾತ್ರೆ ಮತ್ತು ದಾಸೋಹ** : ಕರ್ನಾಟಕ ಸೇರಿದಂತೆ ಇತರ ರಾಜ್ಯಗಳಿಂದಲೂ ಭಕ್ತರು ಪಾದಯಾತ್ರೆಯ ಮೂಲಕ ಕೊಟ್ಟೂರಿಗೆ ಆಗಮಿಸುತ್ತಾರೆ. ದಾರಿಯುದ್ದಕ್ಕೂ ಗ್ರಾಮಸ್ಥರು ಅವರಿಗೆ ಆಹಾರ, ಹಣ್ಣು, ಔಷಧಿ ನೀಡುತ್ತಾರೆ. ದೇವಸ್ಥಾನ ಸಮೀಪ 30 ಕೊಠಡಿಗಳಿದ್ದು, ಯಾತ್ರಿ ನಿವಾಸ ಮತ್ತು ಲಾಡ್ಜ್ ಸೌಲಭ್ಯಗಳಿವೆ. ಭಕ್ತರ ದೇಣಿಗೆಯಿಂದ ದಾಸೋಹ ವ್ಯವಸ್ಥೆ ನಡೆಯುತ್ತದೆ.

ಗುರುಗಳ ಲೀಲಾಸ್ಥಳಗಳು : ದರ್ಬಾರ್ ಮಠ, ಗಚ್ಚಿನ ಮಠ ಸೇರಿದಂತೆ ನಾಲ್ಕು ಪ್ರಮುಖ ಮಠಗಳು ಗುರುಗಳ ಲೀಲಾ, ಉಪದೇಶ ಮತ್ತು ಐಕ್ಯಸ್ಥಳಗಳಾಗಿ ಪ್ರಸಿದ್ಧವಾಗಿವೆ. ಕರಿಲಿಂಗೇಶ್ವರ ಅರ್ಚಕರ ಕುಟುಂಬಕ್ಕೆ ಭೂಮಿ ನೀಡಿದ ಪ್ರಸಂಗವೂ ಪ್ರಚಲಿತದಲ್ಲಿದೆ.

**ವಾರ್ಷಿಕ ಜಾತ್ರೆ** : ಮಹಾಶಿವರಾತ್ರಿ ಹಾಗೂ ಕಾರ್ತಿಕೋತ್ಸವದ ಸಂದರ್ಭದಲ್ಲಿ ನಡೆಯುವ ಜಾತ್ರೆ ಭಕ್ತಿಭಾವದಿಂದ ಕಂಗೊಳಿಸುತ್ತದೆ. ಕೊಟ್ಟೂರಿನ ಸುತ್ತಮುತ್ತ "ಕೊಟ್ರೇಶ್" ಮತ್ತು "ಕೊಟ್ಟೂರಮ್ಮ" ಎಂಬ ಹೆಸರುಗಳು ಸಾಮಾನ್ಯವಾಗಿ ಕಾಣಿಸಿಕೊಳ್ಳುವುದು ಭಕ್ತಿಯ ಸಂಕೇತವಾಗಿದೆ.

# ರೈತರಿಗೆ 'ಆಪತ್ತು ತಂತು ವಿದ್ಯುತ್' ಕುರಿತು ಜಾಗೃತಿ ಮೂಡಿಸಿದ ಪುಸ್ತಕ ಬಿಡುಗಡೆ



■**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಕೃಷಿಕ ಭವನದಲ್ಲಿ ಫೆಬ್ರವರಿ 11, 2026ರಂದು "ಫ್ರಿ ಫೇಯ್ಡ್ ಮೀಟರ್ ಬಂತು – ರೈತರಿಗೆ ಆಪತ್ತು ತಂತು ವಿದ್ಯುತ್ ತಿದ್ದುಪಡಿ ಕಾಯಿದೆ–2025 ಪರಿಣಾಮ" ಎಂಬ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಜೆ.ಎಂ. ವೀರಸಂಗಯ್ಯ ಅವರ ಸಂಪಾದಕತ್ವದಲ್ಲಿ ಹೊರಬಂದಿರುವ ಈ ಕೃತಿಯನ್ನು ಕರ್ನಾಟಕ ರಾಜ್ಯ ರೈತ ಸಂಘ ರಾಜ್ಯ ಸಮಿತಿ ಪ್ರಕಟಿಸಿದೆ.

ಕಾರ್ಯಕ್ರಮದ ಉದ್ಘಾಟನೆಯ ಬಳಿಕ ಮಾತನಾಡಿದ ಹಿರಿಯ ಸಾಹಿತಿ ಮೇಟಿ ಕೊಟ್ರಪ್ಪ ಅವರು, "ರೈತರು ಇಂದು ಅನೇಕ ಹೋರಾಟಗಳಲ್ಲಿ ತೊಡಗಿದ್ದಾರೆ. ಒಂದು ವೇಳೆ 'ದೆಹಲಿ ಚಲೋ' ಹೋರಾಟವನ್ನು ಸುಮಾರು ಒಂದೂವರೆ ವರ್ಷ ನಡೆಸಿದ ರೈತರಿಗೆ ಭಯೋತ್ಪಾದಕರು, ಉಗ್ರರು ಎಂಬ ಬಿರುದುಗಳನ್ನು ನೀಡಲಾಯಿತು. ಆದರೆ ರೈತ ಹೋರಾಟಗಳು ಎಂದಿಗೂ ನಿಲ್ಲುವುದಿಲ್ಲ ಎಂಬುದನ್ನು ಆಡಳಿತ ವರ್ಗ ನೆನಪಿನಲ್ಲಿ ಇಟ್ಟುಕೊಳ್ಳಬೇಕು," ಎಂದು ಹೇಳಿದರು.

ಕೃಷಿಕ ಸಮಾಜದ ಮುಖಂಡ ದೇವರಾಜ್ ಮಾತನಾಡಿ, "ವೀರಸಂಗಯ್ಯ ಅವರು ನಿಸ್ವಾರ್ಥವಾಗಿ ರೈತರ ಪರವಾಗಿ ಹೋರಾಟ ನಡೆಸುತ್ತಿರುವವರು. ಅನೇಕ ಬಾರಿ 'ಬೆಂಗಳೂರು ಚಲೋ' ಹೋರಾಟ ನಡೆಸಿ, ವಿದ್ಯುತ್ ತಿದ್ದುಪಡಿ ಕಾಯಿದೆ ವಿರುದ್ಧ ಉಪ್ಪಾರಗಟ್ಟಿ ಗ್ರಾಮದಿಂದ ಪತ್ರ ಚಳುವಳಿ ಸೇರಿದಂತೆ ಹಲವು ಹೋರಾಟಗಳನ್ನು ನಡೆಸಿದ್ದಾರೆ. ಆ ಸಮಯದಲ್ಲಿ ನಡೆದ ಹೋರಾಟದಿಂದ ಕಾಯ್ದೆಯನ್ನು ಹಿಂತೆಗೆದುಕೊಳ್ಳುವಂತೆ ಒತ್ತಾಯಿಸಲಾಗಿತ್ತು. ಆದರೆ ಕಾಯ್ದೆ ವಾಪಸ್ ಆಗದೆ ಇರುವುದರಿಂದ, ರೈತರಿಗೆ ಜಾಗೃತಿ ಮೂಡಿಸಲು ಪುಸ್ತಕ ರೂಪದಲ್ಲಿ ಮಾಹಿತಿ ನೀಡುತ್ತಿದ್ದಾರೆ," ಎಂದು ತಿಳಿಸಿದರು.

ರಂಗನಾಥ್ ಹವಲ್ದಾರ್ ಮಾತನಾಡಿ, "ಖಾಸಗೀಕರಣ ಎಂದಿಗೂ ಅಪಾಯಕಾರಿ. ಸರ್ಕಾರವೇ ಸರ್ಕಾರವಾಗಿರಬೇಕು. ಜಾತಿ, ಧರ್ಮ, ಭಾಷೆ, ಗಡಿ ಮೀರಿದ ಹೋರಾಟ ಅಗತ್ಯ. ವೀರಸಂಗಯ್ಯ ಅವರ ಕಾರ್ಯಕ್ಕೆ ನಾವು ಕೇವಲ ತರ್ಜುಮೆ ಮಾಡಿದ್ದೇವೆ ಅಷ್ಟೇ, ಇದರಲ್ಲಿರುವ ಅಕ್ಷರ ನನ್ನದೇ ಅಲ್ಲ," ಎಂದು ಹೇಳಿದರು. ಜೊತೆಗೆ, ಖಾಸಗೀಕರಣದ ವಿರುದ್ಧ ಅಂತ್ಯದವರೆಗೂ ಹೋರಾಟ ಮುಂದುವರಿಸುವುದಾಗಿ ಹೇಳಿದರು.

ಕಾರ್ಮಿಕ ಸಂಘಟನೆಯ ನಾಯಕ ಜಗನ್ನಾಥ್ ಮಾತನಾಡಿ, "ವೀರಸಂಗಯ್ಯ ಅವರು ಬರೆದಿರುವುದು ಕೇವಲ ಪುಸ್ತಕವಲ್ಲ, ಇದು ಒಂದು ಗ್ರಂಥ. ಎಲ್ಲರೂ ಓದಲೇಬೇಕು. ಸರ್ಕಾರ ಖಾಸಗೀಕರಣದ ಮೂಲಕ ಕೂಲಿಕಾರರನ್ನು ಮತ್ತಷ್ಟು ಬಡತನಕ್ಕೆ ತಳ್ಳುತ್ತಿದೆ. ನರೇಗಾ ರದ್ದುಪಡಿಸುವ ಕ್ರಮವೂ ಕೂಲಿಕಾರರ ಬದುಕಿಗೆ ಹೊಡೆತವಾಗಿದೆ.

'ಮನೆ ಮನೆಯೂ ಕತ್ತಲೆ' ಎಂಬ ಈ ಪುಸ್ತಕ ಅಮೋಘ ಕೊಡುಗೆ," ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಹರಟಿ ಕಾಳಪ್ಪ (ತಾಲೂಕು ಅಧ್ಯಕ್ಷರು, ರೈತ ಸಂಘ), ಹಲಗೇರಿ ಮಹೇಶಪ್ಪ, ರವಿಕುಮಾರ್ (ತಂಬ್ರಹಳ್ಳಿ ಯುವ ಮುಖಂಡ), ಹೆಗ್ಡಾಳ್ ರಾಮಣ್ಣ (ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು), ಜಿ. ಮಂಜುನಾಥ್, ಜಗನ್ನಾಥ್ (ಸಿಪಿಐಎಂ), ನೀಲಕಂಠಪ್ಪ (ಸಹಮತ ವೇದಿಕೆ ಕಾರ್ಯದರ್ಶಿ), ಹನಸಿ ದೇವರಾಜ್ (ಕೃಷಿಕ ಅಧ್ಯಕ್ಷರು), ರಾಜು (ಉಪ ಕಾರ್ಯದರ್ಶಿ), ಮಹದೇವ ಪಾಟೀಲ್, ಚಿಂತ್ರಪಳ್ಳಿ ಲಕ್ಷ್ಮೀದೇವಿ (ಮಹಿಳಾ ರೈತ ಸಂಘ ಅಧ್ಯಕ್ಷರು, ಕೂಡ್ಲಿಗಿ), ರಮೇಶ್ (ರೈತ ಸಂಘ ಅಧ್ಯಕ್ಷರು, ಕೂಡ್ಲಿಗಿ), ತಿಪ್ಪೇಸ್ವಾಮಿ (ಕಾರ್ಯಾಧ್ಯಕ್ಷರು, ಹಡಗಲಿ), ಶಿವರಾಜ್ (ಪ್ರಧಾನ ಕಾರ್ಯದರ್ಶಿ, ಕೂಡ್ಲಿಗಿ), ಮಂಜುನಾಥ್ (ಅಧ್ಯಕ್ಷರು, ಪುರ), ಸಿದ್ದಪ್ಪ ಹೊಸಮನಿ (ಅಧ್ಯಕ್ಷರು, ಹಡಗಲಿ) ಸೇರಿದಂತೆ ಕೂಡ್ಲಿಗಿ, ಕೊಟ್ಟೂರು ಹಾಗೂ ಹಗರಿಬೊಮ್ಮನಹಳ್ಳಿ ತಾಲೂಕುಗಳ ಅನೇಕ ರೈತ ಮುಖಂಡರು ಉಪಸ್ಥಿತರಿದ್ದರು.

# ಅಕ್ರಮ ಬಾಂಗ್ಲಾ ವಲಸಿಗರನ್ನು ರಾಜ್ಯದಿಂದ ಹೊರಹಾಕಿ: ಬೇಕ್ರಿ ರಮೇಶ್ ಆಗ್ರಹ



■**ವಿಜಯಸಾಕ್ಷಿ ಸುದ್ದಿ, ಗದಗ**

ಅಕ್ರಮವಾಗಿ ಕರ್ನಾಟಕದಲ್ಲಿ ನೆಲೆಸಿರುವ ಬಾಂಗ್ಲಾ ವಲಸಿಗರನ್ನು ಕೂಡಲೇ ರಾಜ್ಯದಿಂದ ಹೊರಹಾಕಬೇಕು ಎಂದು ಕದಂಬಸೈನ್ಯ ರಾಜ್ಯಾಧ್ಯಕ್ಷ ಬೇಕ್ರಿ ರಮೇಶ್ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ವಿವಿಧ ಭಾಗಗಳಲ್ಲಿ ಅಕ್ರಮ ವಲಸಿಗರು ನೆಲೆಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ ಎಂದು ಹೇಳಿದರು. ಬೆಂಗಳೂರು ನಗರ ಹಾಗೂ ಗ್ರಾಮಾಂತರ ಪ್ರದೇಶ, ಮಲೆನಾಡು ಭಾಗ ಮತ್ತು ದಕ್ಷಿಣ ಕರ್ನಾಟಕದ ಹಲವೆಡೆ ಇವರ ವಾಸವಿದೆ ಎಂದು ಅವರು ಆರೋಪಿಸಿದರು.

ಅಕ್ರಮ ವಲಸಿಗರು ಆಧಾರ್ ಕಾರ್ಡ್, ಮತದಾರರ ಚೀಟಿ ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯುತ್ತಿರುವುದು ಸರ್ಕಾರದ ವೈಫಲ್ಯವಾಗಿದೆ ಎಂದು ಟೀಕಿಸಿದರು. ಕೆಲವರು ಬ್ಯಾಂಕ್ ಸಾಲ ಸೇರಿದಂತೆ ಹಣಕಾಸು ವ್ಯವಹಾರಗಳಲ್ಲಿ ತೊಡಗಿದ್ದಾರೆ ಎಂದು ಅವರು ಹೇಳಿದರು. ಕೆಲವು ಅಕ್ರಮ ಚಟುವಟಿಕೆಗಳು, ಅಪರಾಧ ಪ್ರಕರಣಗಳು ಹಾಗೂ ನಕಲಿ ನೋಟು ದಂಧೆ ಸೇರಿದಂತೆ ಭದ್ರತಾ ಸಂಬಂಧಿತ ವಿಷಯಗಳಲ್ಲಿ ಇವರ ಸಂಪರ್ಕ ಇರುವ ಅನುಮಾನಗಳಿವೆ ಎಂದು ಆರೋಪಿಸಿದ ಅವರು, ಈ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಈ ಕುರಿತು ಮುಖ್ಯಮಂತ್ರಿಗಳಿಗೆ ಈಗಾಗಲೇ ಮನವಿ ಸಲ್ಲಿಸಲಾಗಿದೆ. ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ರಾಜ್ಯಾದ್ಯಂತ ಪತ್ರ ಚಳುವಳಿ ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕದಂಬಸೈನ್ಯ ಪದಾಧಿಕಾರಿಗಳು ಹಾಗೂ ರೈತ ಸಂಘದ ಮುಖಂಡರು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ








■**ವಿಜಯಸಾಕ್ಷಿ ಸುದ್ದಿ, ಗಂಗಾವತಿ**

ಗಂಗಾವತಿ ತಾಲೂಕು ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘಕ್ಕೆ ಬುಧವಾರ ನೂತನ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಪವನ್‌ಕುಮಾರ್ ಗುಂಡೂರು ಆಯ್ಕೆಯಾಗಿದ್ದು, ಉಪಾಧ್ಯಕ್ಷರಾಗಿ ಶಿವಕುಮಾರ್ ಉಪಾಸಿ ಹಾಗೂ ಮುದುಕನಗೌಡ ಆಯ್ಕೆಯಾದರು. ಕಾರ್ಯದರ್ಶಿಗಳಾಗಿ ಬಸವರಾಜ ಗೌಡನಬಾವಿ ಹಾಗೂ ಹುಸೇನ್ ಬಾಷಾ ಜವಾಬ್ದಾರಿ ವಹಿಸಿಕೊಂಡರು. ಸಂಘಟನಾ ಕಾರ್ಯದರ್ಶಿಗಳಾಗಿ ಎಸ್. ಎಸ್. ಖಾದ್ರಿ, ವಿನಯಕುಮಾರ ಪತ್ರಿಮಠ, ಭವಾನಿ, ಅಮರೇಶ ಹಾಗೂ ಅಜೀಜ್ ಆಯ್ಕೆಯಾದರು. ಖಜಾಂಚಿಯಾಗಿ ಹನುಮಂತ ಹಾಗೂ ಮಾಧ್ಯಮ ಪ್ರತಿನಿಧಿಯಾಗಿ ಬಸವರಾಜ ಕರುಗಲ್ ಅವಿರೋಧವಾಗಿ ಆಯ್ಕೆಯಾದರು.

ಕಾರ್ಯಕಾರಿ ಮಂಡಳಿ ಸದಸ್ಯರಾಗಿ ಕಾದಂಬರಿ ದೇಶಪಾಂಡೆ, ಮಂಜಣ್ಣ ಪೂಜಾರ, ಸೋಮಶೇಖರ ಜೇಕೀನ್, ಕಳಕಪ್ಪ, ನಿರೋಷ, ಪಾಂಡುರಂಗ, ಜಗದೀಶ್, ಉಜ್ಜನಿ ಈಶ್ವರ, ಡಾ. ಮಂಜು ಎನ್., ಡಾ. ಸತೀಶ್ ಮತ್ತು ವಿಶ್ವನಾಥ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಅಧ್ಯಕ್ಷ ಪವನ್‌ಕುಮಾರ್ ಗುಂಡೂರು, ಅತಿಥಿ ಉಪನ್ಯಾಸಕರ ಶ್ರೇಯೋಭಿವೃದ್ಧಿಗೆ ಸಂಘ ಕಂಕಣಬದ್ಧವಾಗಿ ಶ್ರಮಿಸುವುದಾಗಿ ಭರವಸೆ ನೀಡಿದರು.

**ಸಾರ್ವಜನಿಕರ ಅಹವಾಲು ಸ್ವೀಕಾರ ಸಂದರ್ಭದಲ್ಲಿ ಲೋಕಾಯುಕ್ತ ಸಿಪಿಐ ಪರಮೇಶ್ವರ ಕವಟಗಿ**

# ಸೈಬರ್ ವಂಚಕರ ಬಗ್ಗೆ ಎಚ್ಚರಿಕೆಯಿಂದಿರಿ



■**ವಿಜಯಸಾಕ್ಷಿ ಸುದ್ದಿ, ರೋಣ**

ಸರಕಾರಿ ನೌಕರರು ಸೇರಿದಂತೆ ಸಾರ್ವಜನಿಕರು ಸೈಬರ್ ವಂಚಕರಿಂದ ಎಚ್ಚರಿಕೆಯಿಂದಿರುವುದು ಸೂಕ್ತ. ಇಲ್ಲದಿದ್ದರೆ ಇಬ್ಬರ ಮೇಲೂ ಪ್ರಕರಣ ದಾಖಲಿಸಲು ಅವಕಾಶವಿದೆ ಎಂದು ಲೋಕಾಯುಕ್ತ ಸಿಪಿಐ ಪರಮೇಶ್ವರ ಕವಟಗಿ ಹೇಳಿದರು.

ಅವರು ಬುಧವಾರ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕರಿಸುವ ಸಂದರ್ಭದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿ ಮಾತನಾಡಿದರು.

ಸೈಬರ್ ವಂಚಕರು ಪರಿಚಯದವರ ಸೋಗಿನಲ್ಲಿ ಮೋಸ ಮಾಡುವ ಹೊಸ ವಿಧಾನವನ್ನು ಬಳಕೆ ಮಾಡಿಕೊಂಡಿದ್ದಾರೆ. ಕಾರಣ ನಿಮ್ಮ ಹೆಸರಿನಲ್ಲಿ ನಿಮಗೆ ಪರಿಚಯ ಇರುವ ವ್ಯಕ್ತಿಗಳ ಮೊಬೈಲ್‌ಗೆ ಲಿಂಕ್ ಕಳಿಸುತ್ತಾರೆ. ಆಗ ನಮಗೆ ಪರಿಚಯ ಇರುವ ವ್ಯಕ್ತಿ ಎಂದು ಭಾವಿಸಿ ಮೊಬೈಲ್‌ಗೆ ಬಂದಿರುವ ಲಿಂಕ್‌ನ್ನು ಒತ್ತಿದರೆ ನಿಮ್ಮ ಮೊಬೈಲ್‌ನಲ್ಲಿರುವ ಎಲ್ಲ ದಾಖಲೆಗಳು ಸೈಬರ್ ವಂಚಕರಿಗೆ ಲಭ್ಯವಾಗುತ್ತದೆ. ಜೊತೆಗೆ ನಿಮ್ಮ ಬ್ಯಾಂಕ್ ಖಾತೆಯಲ್ಲಿರುವ ಹಣವೂ ಇಲ್ಲದಂತಾಗುತ್ತದೆ ಎಂದು ಎಚ್ಚರಿಸಿದರು. ಗಜೇಂದ್ರಗಡ ಭಾಗದಲ್ಲಿ ಅರಣ್ಯ ಪ್ರದೇಶ ಹೆಚ್ಚಾಗಿದ್ದು, ಅಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಅರಣ್ಯ ಇಲಾಖೆಯವರು ನಡೆಸಬೇಕು. ಇಲಾಖೆಯವರು ನಿಷ್ಕಾಳಜಿ ವಹಿಸದೆ ಹಸಿರೀಕರಣಕ್ಕೆ ಒಲವು ತೋರಬೇಕು. ಅತಿಕ್ರಮಣವಾದ ಅರಣ್ಯ ಇಲಾಖೆಯ ಜಾಗಗಳನ್ನು ಗುರುತಿಸಿ ಅವುಗಳ ರಕ್ಷಣೆಗೆ ಮುಂದಾಗಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಸಾರ್ವಜನಿಕರು ಇಲಾಖೆಗಳ ವಿರುದ್ಧ ದಾಖಲಿಸಿರುವ ದೂರಗಳ ಬಗ್ಗೆ ಇಲಾಖೆಗಳ ಅಧಿಕಾರಿಗಳಿಗೆ ವರದಿ ನೀಡುವಂತೆ ಸೂಚಿಸಿದರು.

ಲೋಕಾಯುಕ್ತ ಪಿಎಸ್‌ಐ ಎಸ್.ಎಚ್. ತೇಲಿ ಮಾತನಾಡಿ, ಸರಕಾರಿ ಕೆಲಸಕ್ಕೆ ಬರುವ ಸಾರ್ವಜನಿಕರನ್ನು ಸುಖಾಸುಮ್ಮನೆ ತಿರುಗಾಡಿಸಬೇಡಿ. ಅವರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯ ಮಾಡುವುದು ಸರಕಾರಿ ನೌಕರರ ಆದ್ಯ ಕರ್ತವ್ಯವಾಗಿರುತ್ತದೆ ಎಂಬುದನ್ನು ಮರೆಯಬಾರದು ಎಂದರು.

ತಹಸೀಲ್ದಾರ ನಾಗರಾಜ ಕೆ, ತಾ.ಪಂ ಇಒ ಚಂದ್ರಶೇಖರ ಖಂದಕೂರ, ಬಿಇಒ ಎ.ಎನ್. ಕಂಬೋಗಿ, ಪಿಎಸ್‌ಐ ಪ್ರಕಾಶ ಬಣಕಾರ, ಕೃಷಿ ಅಧಿಕಾರಿ ಎಸ್.ಎಫ್. ತಹಸೀಲ್ದಾರ, ಜೆ.ಟಿ. ಕೊಪ್ಪದ, ಆರ್.ಎಲ್. ನಾಯಕ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಷ್ಟ್ರಮಟ್ಟದ ಕುಸ್ತಿ ಪಂದ್ಯಾವಳಿಗೆ ರಾಹುಲ್ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಸಂತ ಪಿ. ಸಿದ್ದಮ್ಮನಹಳ್ಳಿ ಅವರ ಪುತ್ರ ಹಾಗೂ ಪ್ರತಿಭಾವಂತ ಕುಸ್ತಿಪಟು ರಾಹುಲ್ ಸಿದ್ದಮ್ಮನಹಳ್ಳಿ ರಾಷ್ಟ್ರಮಟ್ಟದ ಕುಸ್ತಿ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ಫೆಬ್ರವರಿ 6ರಿಂದ 8ರವರೆಗೆ ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನಲ್ಲಿನ ರಾಜ್ಯಮಟ್ಟದ 110 ಕೆ.ಜಿ. ವಿಭಾಗದ ಕುಸ್ತಿ ಪಂದ್ಯಾವಳಿಯಲ್ಲಿ ರಾಹುಲ್ ಪ್ರಥಮ ಸ್ಥಾನ ಪಡೆದು ತನ್ನ ಸಾಮರ್ಥ್ಯವನ್ನು ಮೆರೆದಿದ್ದಾರೆ. ಈ ಸಾಧನೆಯೊಂದಿಗೆ ಅವರು ರಾಷ್ಟ್ರಮಟ್ಟದ ಕುಸ್ತಿ ಪಂದ್ಯಾವಳಿಗೆ ಅರ್ಹತೆ ಪಡೆದಿದ್ದಾರೆ.

ಇದೇ ವೇಳೆ, ಫೆ.15, 2026 ರಂದು ನವದೆಹಲಿ ನಗರದಲ್ಲಿ ನಡೆಯಲಿರುವ ಕೇಲೋ ಇಂಡಿಯಾ ಕುಸ್ತಿ ಪಂದ್ಯಾವಳಿಗೆ ಪರಿಶಿಷ್ಟ ಪಂಗಡದ ಕೋಟಾದಡಿ ರಾಹುಲ್ ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ಅಂತರಾಷ್ಟ್ರೀಯ ಕುಸ್ತಿ ತ ರ ಬೇ ತಿ ದಾ ರ ರಾ ದ ಡಾ. ವಿನೋದಕುಮಾರ ಉಪಸ್ಥಿತರಿದ್ದು, ರಾಹುಲ್ ಅವರ ಸಾಧನೆಗೆ ಅಭಿನಂದನೆ ಸಲ್ಲಿಸಿದರು. ರಾಹುಲ್ ಅವರ ಸಾಧನೆಗೆ ಕುಟುಂಬಸ್ಥರು, ಸ್ನೇಹಿತರು ಹಾಗೂ ಕ್ರೀಡಾಭಿಮಾನಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

**ಜಿಲ್ಲಾಡಳಿತದ ವತಿಯಿಂದ 'ಸುರಕ್ಷಿತ ಅಂತರ್ಜಾಲ ದಿನ' ಕಾರ್ಯಕ್ರಮ**

# ಜವಾಬ್ದಾರಿಯುತ ಬಳಕೆಯೇ ಡಿಜಿಟಲ್ ಭದ್ರತೆಯ ಮಂತ್ರ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಡಿಜಿಟಲ್ ಯುಗದಲ್ಲಿ ಅಂತರ್ಜಾಲ ಬಳಕೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಸುರಕ್ಷಿತ ಹಾಗೂ ಜವಾಬ್ದಾರಿಯುತ ಅಂತರ್ಜಾಲ ಬಳಕೆಯ ಕುರಿತು ಜಾಗೃತಿ ಮೂಡಿಸಲು ಸುರಕ್ಷಿತ ಅಂತರ್ಜಾಲ ದಿನವನ್ನು ಆಚರಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪೊಲೀಸ್ ಇಲಾಖೆ ಹಾಗೂ ಮಾಹಿತಿ ತಂತ್ರಜ್ಞಾನ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಸುರಕ್ಷಿತ ಅಂತರ್ಜಾಲ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂತರ್ಜಾಲವು ಶಿಕ್ಷಣ, ಮಾಹಿತಿ ವಿನಿಮಯ ಹಾಗೂ ಸಂವಹನ ಕ್ಷೇತ್ರದಲ್ಲಿ ಮಹತ್ತರ ಕ್ರಾಂತಿ ತಂದಿದ್ದರೂ, ಅದರ ದುರುಪಯೋಗದಿಂದ ಸೈಬರ್ ಅಪರಾಧಗಳು ಹೆಚ್ಚುತ್ತಿವೆ. ನಕಲಿ ವೆಬ್‌ಸೈಟ್‌ಗಳು, ಫಿಶಿಂಗ್, ಹ್ಯಾಕಿಂಗ್, ಸೈಬರ್ ಬಲಿ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ನಡೆಯುವ ವಂಚನೆಗಳಿಂದ ಎಚ್ಚರಿಕೆಯಿಂದಿರಬೇಕು ಎಂದು ತಿಳಿಸಿದರು.

ಡಿವೈಎಸ್ಪಿ ಮಹಾಂತೇಶ ಸಜ್ಜನ್ ಮಾತನಾಡಿ, ಮೊಬೈಲ್‌ನಲ್ಲಿ ಬರುವ ಎಲ್ಲಾ ನೋಟಿಫಿಕೇಟಿನ್‌ಗಳನ್ನ ಆಫ್ ಮಾಡಿದಾಗ ಅಂತರ್ಜಾಲದಿಂದ ಸುರಕ್ಷಿತವಾಗಿರಲು ಸಾಧ್ಯ. ಸಾಮಾಜಿಕ ಮಾಧ್ಯಗಳಾದ ಫೇಸ್ಬುಕ್, ಟ್ವಿಟ್ಟರ್, ಇನ್ಸ್ಟಾಗ್ರಾಮ್, ಯೂಟ್ಯೂಬ್, ವಾಟ್ಸಪ್ ಅಕೌಂಟ್ ಕ್ರಿಯೇಟ್ ಮಾಡುವಾಗ ಬಹಳ ಎಚ್ಚರಿಕೆ ವಹಿಸುವುದು ಅಗತ್ಯ. ಮೊಬೈಲ್‌ನಲ್ಲಿ ನಿಮ್ಮ ಬ್ಯಾಂಕ್ ಖಾತೆಗಳ ಮಾಹಿತಿಯನ್ನು ಹಂಚಿಕೊಳ್ಳದಿರಿ. ಯಾವುದೇ ಪಾಸ್ವರ್ಡ್ ಆಗಲಿ 3 ತಿಂಗಳಿಗೊಮ್ಮೆ ಬದಲಿಸಿ. ಎಐ ಸೈಬರ್ ಅಪರಾಧಗಳ ಬಗ್ಗೆ ಅರಿವು ಮೂಡಿಸುವ ಕೆಲಸವನ್ನು ಮಾಡುತ್ತದೆ. ಸುರಕ್ಷಿತ ಅಂತರ್ಜಾಲದ ಮಾಹಿತಿ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಿಗುವಂತಾಗಬೇಕು ಎಂದರು.

ಜಿಲ್ಲಾ ಸಾಂಖ್ಯಿಕ ಮತ್ತು ಮಾಹಿತಿ ಅಧಿಕಾರಿ ಸತೀಶ ನಾಯಕ ಮಾತನಾಡಿ, ಸುರಕ್ಷಿತ ಇಂಟರ್ನೆಟ್ ಒಂದು ಮಾಧ್ಯಮ. ಒಂದು ಡಿವೈಸ್‌ನಿಂದ ಇನ್ನೊಂದು ಡಿವೈಸ್‌ಗೆ ಡಿಜಿಟಲ್, ಸಾಮಾಜಿಕ ಮಾಧ್ಯಮ ಮುಖಾಂತರ ಮಾಹಿತಿಯನ್ನು ಸಂಗ್ರಹಣೆ ಮಾಡಿ ರವಾನಿಸುತ್ತದೆ ಎಂದು ತಿಳಿಸಿ, ಸುರಕ್ಷಿತ ಅಂತರ್ಜಾಲದ ಆಯ್ಕೆಗಳು, ಎಐನ ಸುರಕ್ಷಿತ ಮತ್ತು ಜವಾಬ್ದಾರಿಯುತ ಬಳಕೆಯ ಅಂಶಗಳ ಬಗ್ಗೆ ಅಧಿಕಾರಿಗಳಿಗೆ ಅರಿವು ಮತ್ತು ಜಾಗೃತಿ ಮೂಡಿಸಿದರು. ಕೃತಕ ಬುದ್ಧಿಮತ್ತೆ ಕುರಿತು ವಿವರವಾಗಿ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.




ಈ ಹಿಂದೆ ಡೈರಿ ಬರೆಯುವ ಹವ್ಯಾಸವಿತ್ತು. ಆದರೆ ಈಗಿನ ಕಾಲದ ಜನರಿಗೆ ಡೈರಿ ಬರೆಯುವ ಹವ್ಯಾಸ ಕಡಿಮೆಯಾಗಿದೆ. ಇದಕ್ಕೆ ಕಾರಣ ಅಂತರ್ಜಾಲ ಬಳಕೆ. ಮೊಬೈಲ್ ಫೋನ್‌ಗಳಲ್ಲಿ ಹಲವಾರು ರೀತಿಯ ಆ್ಯಪ್‌ಗಳಿವೆ. ಪ್ರತಿಯೊಂದಕ್ಕೂ ಸೆಕ್ಯೂರಿಟಿ ಪಾಸ್ವರ್ಡ್ ಮತ್ತು ಐಡಿ ಪ್ರೈವಸಿ ನೋಟಿಫಿಕೇಶನ್‌ಗಳನ್ನು ಆಫ್ ಮಾಡಬೇಕು. ಆಗ ಮಾತ್ರ ನಮ್ಮ ಮೊಬೈಲ್ ಸುರಕ್ಷಿತವಾಗಿರಲು ಸಾಧ್ಯ. ಜೀವನದಲ್ಲಿ ಮೋಸ ಹೋಗುವವರು ಹೆಚ್ಚಾಗಿರುವುದರಿಂದಲೇ ಮೋಸ ಮಾಡುವವರು ಹೆಚ್ಚಾಗಿದ್ದಾರೆ. ಹಾಗಾಗಿ ನಾವು ಮೊಬೈಲ್‌ಗಳಲ್ಲಿ ಸುರಕ್ಷತೆ ಕಾಪಾಡುವುದು ಬಹಳ ಮುಖ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

# ಕಾಯಕದಲ್ಲಿಯೇ ದೇವರನ್ನು ಕಾಣಬೇಕು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಮಂಗಳವಾರ ಕಾಯಕ ಶರಣರ ಜಯಂತಿ ಅಂಗವಾಗಿ ಶರಣರಾದ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ, ಉರಿಲಿಂಗ ಪೆದ್ದಿ ಅವರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ ಸ್ಮರಿಸಲಾಯಿತು.

ಈ ವೇಳೆ ಮಾತನಾಡಿದ ತಹಸೀಲ್ದಾರ ಧನಂಜಯ ಎಂ, ಶರಣರು ಕಾಯಕವೇ ಕೈಲಾಸ, ಕಾಯಕದಲ್ಲಿಯೇ ದೇವರನ್ನು ಕಾಣಬೇಕು ಎಂಬ ಜೀವನದ ಮೂಲ ತತ್ವವನ್ನು ಜಗತ್ತಿಗೆ ಸಾರಿದ್ದಾರೆ. ಶರಣರು ಸ್ವತಃ ಸತ್ಯ ಶುದ್ಧ ಕಾಯಕದ ಜೊತೆಗೆ ಸಮಾಜದ ಶ್ರೇಯೋಭಿವೃದ್ಧಿಗಾಗಿ ತಮ್ಮನ್ನು ಸಮರ್ಪಿಸಿಕೊಂಡಿದ್ದರು. ಶರಣರು ಸಾರಿದ ತತ್ವ ಚಿಂತನೆಗಳು, ಮೌಲ್ಯಗಳನ್ನು ಎಲ್ಲರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡರೆ ಆರೋಗ್ಯಕರ ಸಮಾಜ ನಿರ್ಮಾಣವಾಗುತ್ತದೆ ಎಂದರು.

ಹಿರಿಯರಾದ ಪೂರ್ಣಾಜಿ ಖರಾಟೆ ಮಾತನಾಡಿ, ಜಾತಿ, ಧರ್ಮ, ಮೇಲು-ಕೀಳು ಬದಿಗೊತ್ತಿ ಸಮಾಜದ ಉದ್ಧಾರಕ್ಕಾಗಿ ಶರಣದ ಬದುಕು ಸಮಾಜಕ್ಕೆ ದಾರಿದೀಪವಾಗಿದೆ. ಯಾವುದೇ ಕೆಲಸ ಕನಿಷ್ಠವಲ್ಲ, ಕೆಲಸವೇ ದೈವ ಎಂಬ ಸಂದೇಶದೊಂದಿಗೆ ಶ್ರಮಗೌರವ, ಸಮಾನತೆ, ಬದುಕಿನ ರೀತಿ, ಮಾನವೀಯ ಮೌಲ್ಯಗಳನ್ನು ಸಮಾಜಕ್ಕೆ ನೀಡಿದ ಮಹಾನ್ ಶರಣರು ಸದಾ ಸ್ಮರಣೀಯರು ಎಂದರು.

ಈ ವೇಳೆ ಸಮಗಾರ ಸಮಾಜದ ಜಿಲ್ಲಾಧ್ಯಕ್ಷ ಅನಿಲ ಮುಳಗುಂದ, ಅಬ್ದುಲ್‌ಕರೀಂ ಸೂರಣಗಿ, ಎನ್. ಆರ್. ಸಾತಪುತೆ, ಡಾ. ಸದಾನಂದ ಹಂಜಗಿ, ರಘು ಸಾತಪುತೆ, ಸತೀಶ ನಾರಾಯಣಕರ, ಮಂಜು ಗಜಾಕೋಶ ಸೇರಿ ವಿವಿಧ ಸಮಾಜದ ಮುಖಂಡರು, ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳು ಇದ್ದರು.

# ಅನ್ನಸಂತರ್ಪಣೆಗೆ ಶಾಸಕ ನೇಮಿರಾಜ್ ನಾಯ್ಕ ಚಾಲನೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕೊಟ್ಟೂರು ಪಟ್ಟಣದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ದಿ. 12-06-2026 ಗುರುವಾರ ನಡೆಯಲಿರುವ ರಥೋತ್ಸವದ ನಿಮಿತ್ತ, ದೂರದೂರಿನಿಂದ ಆಗಮಿಸುವ ಭಕ್ತಾದಿಗಳಿಗೆ ಅನ್ನಸಂತರ್ಪಣೆ ಕಾರ್ಯಕ್ರಮಕ್ಕೆ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ನೇಮಿರಾಜ್ ನಾಯ್ಕ ಚಾಲನೆ ನೀಡಿದರು.

ರಥೋತ್ಸವಕ್ಕೆ ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆ ಇದ್ದು, ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸಲು ಪೊಲೀಸ್ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿದ್ದೇನೆ ಎಂದು ಶಾಸಕ ನೇಮಿರಾಜ್ ನಾಯ್ಕ ಹೇಳಿದರು.

ಭಕ್ತರಿಗೆ ಕುಡಿಯುವ ನೀರು, ವೈದ್ಯಕೀಯ ಸೌಲಭ್ಯ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ವ್ಯವಸ್ಥೆಯನ್ನೂ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಮೃತ್ಯುಂಜಯ ಬದಾಮಿ, ರಾಜಕೀಯ ಮುಖಂಡರು ಹಾಗೂ ಉಜ್ಜಿನಿ ವಿದ್ಯಾಪೀಠದ ಕಾರ್ಯದರ್ಶಿ ಎಂ.ಎಂ.ಜೆ. ಹರ್ಷವರ್ಧನ, ಐ.ಟಿ. ಕೊಟ್ರೇಶ್, ಜಗದೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ವಿಜ್ಞಾನ ರಸಪ್ರಶ್ನೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ








■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಬೆಂಗಳೂರು ಇವರು ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 7ನೇ ವರ್ಷದ ಸರ್ ಸಿ.ವಿ. ರಾಮನ್ ಆನ್‌ಲೈನ್ ವಿಜ್ಞಾನ ರಸಪ್ರಶ್ನೆ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯಿಂದ 444 ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಅದರಲ್ಲಿ ವಿದ್ಯಾರ್ಥಿಗಳಾದ ಅಣ್ಣಯ್ಯ ಕಂಬಳಿ-ಎಸ್.ಎ. ಹೈಸ್ಕೂಲ್ ನಿಡಗುಂದಿ ಪ್ರಥಮ ಸ್ಥಾನ, ಖುಷಿ ಅಂಬಕ್ಕಿ-ಗುರುಬಸವ ಸಿಬಿಎಸ್‌ಸಿ ಶಾಲೆ ಗದಗ ದ್ವಿತೀಯ ಸ್ಥಾನ, ವಿನಾಯಕ ದಹಿಂದೆ-ಜೆ.ಟಿ. ಆಂಗ್ಲ ಮಾಧ್ಯಮ ಶಾಲೆ ಗದಗ ತೃತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಇವರಿಗೆ ಮಾರ್ಗದರ್ಶನ ನೀಡಿದ ಎಲ್ಲಾ ಶಾಲೆಯ ಶಿಕ್ಷಕರಿಗೆ, ಮುಖ್ಯೋಪಾಧ್ಯಾಯರಿಗೆ ಜಿಲ್ಲಾ ಅಧ್ಯಕ್ಷರಾದ ಪ್ರೊ. ಬಿ.ಕೆ. ಪೂಜಾರ, ಜಿಲ್ಲಾ ಸಂಯೋಜಕರಾದ ಎ.ಕೆ. ಮುಲ್ಲಾನವರ ಮತ್ತು ರವಿ ದೇವರಡ್ಡಿ ಅಭಿನಂದನೆ ಸಲ್ಲಿಸಿದ್ದಾರೆ.

# ಕ್ರೀಡಾಕ್ಷೇತ್ರವು ಇಚ್ಛಾಶಕ್ತಿ, ಏಕಾಗ್ರತೆ ಬೆಳೆಸುತ್ತದೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವೈಯಕ್ತಿಕ ಓರೆ-ಕೋರೆಗಳನ್ನು ತಿದ್ದಿಕೊಂಡು ಹೊಂದಾಣಿಕೆಯ ಮನೋಭಾವವನ್ನು ಬೆಳೆಸಿಕೊಳ್ಳಲು ಕ್ರೀಡೆ ನೆರವಾಗುತ್ತದೆ. ದೈಹಿಕ, ಮಾನಸಿಕ ಬೆಳವಣಿಗೆಗೆ ಸಹಾಯ ಮಾಡುತ್ತದೆ. ಈ ಮೂಲಕ ಧೈರ್ಯ ಮತ್ತು ಸಾಹಸ ಗುಣಗಳನ್ನು ವೃದ್ಧಿಸುತ್ತದೆ ಎಂದು ಎಸ್‌ಎವಿವಿಪಿ ಸಮಿತಿ ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ ಹೇಳಿದರು.

ಪಟ್ಟಣದ ಬಸವೇಶ್ವರ ಸಿಬಿಎಸ್‌ಸಿ ಶಾಲೆಯಲ್ಲಿ ನಡೆದ ವಾರ್ಷಿಕ ಕ್ರೀಡಾಕೂಟದಲ್ಲಿ ಅವರು ಮಾತನಾಡಿದರು.

ಕ್ರೀಡಾಕ್ಷೇತ್ರವು ಇಚ್ಛಾಶಕ್ತಿ, ಏಕಾಗ್ರತೆ ಮತ್ತು ಸ್ಪರ್ಧಾ ಮನೋಭಾವವನ್ನು ಬೆಳೆಸುತ್ತದೆ. ನಿರಂತರವಾದ ಕಠಿಣ ಪ್ರಯತ್ನದಿಂದ ಮಾತ್ರ ಸಾಧನೆ ಮಾಡಲು ಸಾಧ್ಯ. ಸೋಲು ಕೊನೆಯಲ್ಲ. ಸೋಲೇ ಗೆಲುವಿನ ಸೋಪಾನ. ಕ್ರೀಡೆಯಲ್ಲಿ ಪರಿಣಿತರಾದವರಿಗೆ ಶೈಕ್ಷಣಿಕ ಕ್ಷೇತ್ರದಲ್ಲೂ ಹಲವಾರು ಅವಕಾಶಗಳಿವೆ. ಭಾಗವಹಿಸಿದ ಎಲ್ಲಾ ಕ್ರೀಡಾಪಟುಗಳಿಗೆ ಉಜ್ವಲ ಭವಿಷ್ಯವಿದೆ. ಕ್ರೀಡೆಯ ಮುಂದಿನ ಹಂತದ ಸ್ಪರ್ಧೆಗಳಿಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂದರು.

ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಮಾತನಾಡಿ, ಕ್ರೀಡೆಯಿಂದ ಶಿಸ್ತು, ಸಂಯಮ ಮತ್ತು ಆರೋಗ್ಯ ವೃದ್ಧಿಸುತ್ತದೆ. ಕ್ರೀಡೆಯಲ್ಲಿ ಗೆಲ್ಲಲು ಉತ್ತಮ ತರಬೇತಿ ಅಗತ್ಯ. ಪರಿಣತಿಯನ್ನು ಗಳಿಸಲು ಸತತ ಸಾಧನೆ ಮಾಡಬೇಕು ಎಂದರು.

ಅಭಿನವ ಪಿಯು ಕಾಲೇಜು ಪ್ರಾಚಾರ್ಯೆ ಅನಸೂಯಾ ಪಾಟೀಲ, ಎಂ.ಬಿ. ಮೆಣಸಗಿ, ಮುಖ್ಯ ಶಿಕ್ಷಕ ಬಿ.ಎಚ್. ಬಂಡಿಹಾಳ, ಸಂಯೋಜಕಿ ಶ್ವೇತಾ ಗೋವಿಂದ, ವೀರೇಶ ಕಿನ್ನಾಳಮಠ ಇದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಚಿಕ್ಕ ಹಾಗೂ ಪುಟ್ಟ ಉದ್ಯಮಿದಾರರಿಗೆ ತಮ್ಮ ಉತ್ಪನ್ನಗಳ ಬ್ರಾಂಡಿಂಗ್ ವ್ಯವಸ್ಥೆಗಾಗಿ ಆರ್ಥಿಕ ಸಹಾಯ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಲಭ್ಯವಿದೆ.

ಮೊದಲ ಅರ್ಜಿ ಸಲ್ಲಿಸಿದವರಿಗೆ ಮೊದಲ ಆದ್ಯತೆ ಮೇರೆಗೆ ಆಯ್ಕೆ ಮಾಡಲಾಗುವುದು. ಆಸಕ್ತಿಯುಳ್ಳ ಉದ್ಯಮ ಆಧಾರ ನೋಂದಣಿ ಹೊಂದಿರುವ ಉದ್ಯಮಿಗಳು ಫೆಬ್ರವರಿ 20 ರೊಳಗಾಗಿ ಕಚೇರಿ ವೇಳೆಯಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ಕಿರಣಕುಮಾರ (ಖಂಒಕ ಸಮನ್ವಯಗಾರರು): 8123342965 ಗೋವಿಂದಕುಮಾರ (RAMP ಸಮನ್ವಯಗಾರರು): 9886254698 ಮೇನಕಾ (ಬೆರಳಚ್ಚುಗಾರರು): 6360093883 ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ: 08372-200122.

# ಅತಿವೇಗ, ಮಿತಿಮೀರಿದ ವಿದ್ಯಾರ್ಥಿಗಳ ಸಾಗಣೆ: ಇಬ್ಬರು ಆಟೋ ಚಾಲಕರ ವಿರುದ್ಧ ಪ್ರಕರಣ!

■ವಿಜಯಸಾಕ್ಷಿ ಸುದ್ದಿ, ಗದಗ

ಫೆಬ್ರವರಿ 10ರಂದು ಗದಗ ನಗರದ ಮುಳಗುಂದ ನಾಕಾ ಸರ್ಕಲ್ ಹತ್ತಿರ ಸಂಚಾರ ನಿಯಮ ಉಲ್ಲಂಘನೆ ಮಾಡುವ ವಾಹನಗಳ ತಪಾಸಣೆ ವೇಳೆ ಇಬ್ಬರು ಆಟೋ ಚಾಲಕರು ನಿಯಮ ಉಲ್ಲಂಘಿಸಿರುವುದು ಪತ್ತೆಯಾಗಿದೆ.

ಆಟೋ ನಂ. ಏಂ-26 ೦ 2308 ಚಾಲಕ ಪ್ರಕಾಶ್ ತಂದೆ: ಉಮೇಶ್ ದಿಂಡೂರು, ವಯಸ್ಸು 32 ವರ್ಷ, ಸಾ: ಅಸುಂಡಿ, ತಾ: ಜಿ: ಗದಗ, ಮೊ. 9748893995) ಹಾಗೂ ವಾಹನ ನಂ. KA-26 B 0846 ಚಾಲಕ ರಘು ತಂದೆ: ಲಕ್ಷ್ಮಣ ಕಟ್ಟಿಮನಿ, ವಯಸ್ಸು 25 ವರ್ಷ, ಸಾ: ಸಿದ್ಧಾರ್ಥನಗರ, ಬಾಲವಿನಾಯಕ ಶಾಲೆ ಹತ್ತಿರ, ಮೊ. 9353908667) ಅವರು ಅತಿವೇಗ ಮತ್ತು ನಿಷ್ಕಾಳಜಿತನದಿಂದ ವಾಹನ ಚಾಲನೆ ಮಾಡುತ್ತಿರುವುದು ಕಂಡುಬಂದಿದೆ.

ಇದಲ್ಲದೆ, ಮಿತಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ ಮಕ್ಕಳನ್ನು ವಾಹನದಲ್ಲಿ ಕರೆದೊಯ್ಯುತ್ತಿರುವುದು ಕೂಡ ಪತ್ತೆಯಾಗಿದೆ.

ಸಂಚಾರ ನಿಯಮಗಳನ್ನು ಉಲ್ಲಂಘಿಸಿರುವ ಹಿನ್ನೆಲೆಯಲ್ಲಿ ಇಬ್ಬರ ಮೇಲೂ ಕಾನೂನು ಕ್ರಮ ಕೈಗೊಂಡು ಪ್ರಕರಣ ದಾಖಲಿಸಲಾಗಿದೆ.

ಹಾಗೂ ಇಬ್ಬರು ಚಾಲಕರ ಚಾಲನಾ ಪರವಾನಿಗೆಯನ್ನು ರದ್ದುಗೊಳಿಸುವ ಕುರಿತು ಪ್ರಾದೇಶಿಕ ರಸ್ತೆ ಸಾರಿಗೆ ಅಧಿಕಾರಿಗಳಿಗೆ (ಆರ್‌ಟಿಒ), ಗದಗ ಅವರಿಗೆ ವರದಿ ಸಲ್ಲಿಸಲಾಗಿದೆ ಎಂದು ಟ್ರಾಫಿಕ್ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಂತ್ರಿಕ ಸಮಸ್ಯೆ ಇತ್ಯರ್ಥಕ್ಕೆ ಸಚಿವರ ಸೂಚನೆ

▶▶ಮೊದಲನೇ ಪುಟದಿಂದ

ಆದಾಯ ತೆರಿಗೆ ಹಾಗೂ ಜಿಎಸ್‌ಟಿ ಪಾವತಿಸದಿರುವುದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸಿದ 650 ಫಲಾನುಭವಿಗಳಿಗೆ ಶೀಘ್ರದಲ್ಲಿ ಯೋಜನೆಯ ಸೌಲಭ್ಯ ಕಲ್ಪಿಸುವಂತೆ ಸಚಿವರು ಸೂಚಿಸಿದರು.

ಯೋಜನೆಯ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಸಮಯಕ್ಕೆ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿ ಯುತವಾಗಿ ಕೆಲಸ ಮಾಡಬೇಕು ಸಚಿವ ಡಾ. ಎಚ್. ಕೆ. ಪಾಟೀಲ ಸೂಚಿಸಿದರು. ಗದಗ ತಾಲೂಕಿನ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಗೃಹಲಕ್ಷ್ಮೀ ಯೋಜನೆಯ ಅನುಷ್ಠಾನಕ್ಕೆ ಇರುವ ತಾಂತ್ರಿಕ ಸಮಸ್ಯೆಗಳ ಕುರಿತು ಸಭೆಯ ಗಮನಕ್ಕೆ ತರುವ ಮೂಲಕ ಪರಿಹಾರ ಮಾರ್ಗ ನೀಡುವಂತೆ ಕೋರಿದರು.

ಸಭೆಯಲ್ಲಿ ಗದಗ ತಾಲೂಕಿನ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯ ದಯಾನಂದ ಪವಾರ, ರಾಜ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಯೋಜನಾ ನಿರ್ದೇಶಕರಾದ ಅನಿತಾ ಲಕ್ಷ್ಮೀ ಹಾಗೂ ರೋಜಲೀನ್, ಸಹಾಯಕ ನಿರ್ದೇಶಕರಾದ ಹೇಮಾ ಎಚ್, ರೀಜು, ಗದಗ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಅಧೀಕ್ಷಕ ರಾಜು ಕಂಟಿಗೊಣ್ಣವರ ಸೇರಿದಂತೆ ಗದಗ ಜಿಲ್ಲೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಜರಿದ್ದರು.

ಕುಟುಂಬದ ಮುಖ್ಯಸ್ಥ ಮರಣ ಹೊಂದಿದ ಸಂದರ್ಭಗಳಲ್ಲಿ ರೇಷನ್ ಕಾರ್ಡ್ ನವೀಕರಣಕ್ಕೆ ಉಂಟಾಗಿರುವ ತಾಂತ್ರಿಕ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಜನರಿಗೆ ತೊಂದರೆ ಆಗದಂತೆ ಪ್ರಕ್ರಿಯೆ ಸರಳಗೊಳಿಸುವುದು ಅಗತ್ಯ. ಸರ್ಕಾರದ ಮಹತ್ತರ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮೀ ಯೋಜನೆ ಕುಟುಂಬಗಳ ಆರ್ಥಿಕ ನಿರ್ವಹಣೆಗೆ ನೇರ ಸಹಕಾರಿಯಾಗಿದ್ದು, ದೈನಂದಿನ ಕುಟುಂಬ ನಿರ್ವಹಣೆಗೆ ಶಕ್ತಿಯನ್ನು ನೀಡುತ್ತಿದೆ ಎಂದು ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಆಹಾರ ವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯಡಿ ಸ್ಥಳಾಂತರಿಸಬಹುದಾದ ತಿಂಡಿ ಮಳಿಗೆಗಳನ್ನು ನಾಲ್ಕು ಚಕ್ರಗಳ ಇಗಿ ಗೂಡ್ಸ್ ವಾಹನಗಳಲ್ಲಿ ನವೀಕರಿಸಿ ಫಲಾನುಭವಿಗಳಿಗೆ ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ.

ವಾಹನ ಖರೀದಿಗೆ ರೂ. 3.00 ಲಕ್ಷಗಳ ಸಹಾಯಧನ ನೀಡಲಾಗುವುದು. ಉಳಿದ ಮೊತ್ತವನ್ನು ಬ್ಯಾಂಕ್ ಅಥವಾ ಹಣಕಾಸು ಸಂಸ್ಥೆಗಳಿಂದ ಸಾಲವಾಗಿ ಪಡೆಯಬಹುದು.

ಅರ್ಹತೆಗಳು : ಮರಾಠ ಜನಾಂಗದ ಹಿಂದುಳಿದ ವರ್ಗಗಳ ಪ್ರವರ್ಗ-3ಬಿ ಅಡಿಯಲ್ಲಿ 2(ಎ)ರಿಂದ 2(ಎಫ್) ವರೆಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 3,00,000/- ಒಳಗಿರಬೇಕು. ಅರ್ಜಿದಾರರ ವಯಸ್ಸು 21 ರಿಂದ 45 ವರ್ಷಗಳೊಳಗಿರಬೇಕು. ಅನ್ವಯಿಸುವ ಜಾತಿಗಳು: (ಎ) ಮರಾಠ, ಮರಾಠ,(ಬಿ) ಅರೆಕ್ಷತ್ರಿ, ಅರೆ ಮರಾಠ, ಆರ್ಯ ಮರಾಠ, (ಸಿ) ಆರ್ಯ, ಆರ್ಯರು, (ಡಿ) ಕೊಂಕಣ ಮರಾಠ , (ಇ) ಕ್ಷತ್ರಿಯ ಮರಾಠ/ ಕ್ಷತ್ರಿಯ ಮರಾಠ

(ಎಫ್) ಕುಳವಾಡಿ.

ಅರ್ಜಿ ಸಲ್ಲಿಸುವ ವಿಧಾನ: ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್ (http://sevasindhu.karnataka.gov.in) ಮೂಲಕ ಗ್ರಾಮಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಇತರ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಬಹುದು.

ಅರ್ಜಿದಾರರು: ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು.

ಆಧಾರ್ ಕಾರ್ಡ್, ಜಾತಿ ಹಾಗೂ ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್‌ಬುಕ್‌ನಲ್ಲಿರುವ ಹೆಸರುಗಳು ಹೊಂದಾಣಿಕೆಯಾಗಿರಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: ಮಾರ್ಚ್ 05 ಹೆಚ್ಚಿನ ಮಾಹಿತಿಗೆ:

ಜಿಲ್ಲಾ ವ್ಯವಸ್ಥಾಪಕರ ಕಚೇರಿ, ರೂಂ ನಂ: 202, 2ನೇ ಮಹಡಿ, ಜಿಲ್ಲಾ ಆಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ. - ಸಹಾಯವಾಣಿ: 080-29903994, 8867537799

- ಕಚೇರಿ ದೂರವಾಣಿ: 08372-232327 ಎಂದು ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಹಾರ ಕಿಯೋಸ್ಕ್ ಯೋಜನೆಗೆ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಆಹಾರ ವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯಡಿ ಸೌಲಭ್ಯ ಪಡೆಯ ಬಯಸುವವರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಸ್ಥಳಾಂತರಿಸಬಹುದಾದ ತಿಂಡಿ ಮಳಿಗೆಗಳಿಗಾಗಿ ನಾಲ್ಕು ಚಕ್ರಗಳ ಇ–ಗೂಡ್ಸ್ ವಾಹನಗಳನ್ನು ಅಗತ್ಯಕ್ಕೆ ತಕ್ಕಂತೆ ಪರಿಷ್ಕರಿಸಿ ಫಲಾನುಭವಿಗಳಿಗೆ ವಿತರಿಸಲಾಗುತ್ತದೆ. ವಾಹನ ಖರೀದಿಗೆ ನಿಗಮದಿಂದ ರೂ. 3.00 ಲಕ್ಷಗಳ ಸಹಾಯಧನ ನೀಡಲಾಗುವುದು. ಉಳಿದ ಮೊತ್ತವನ್ನು ಬ್ಯಾಂಕುಗಳು ಅಥವಾ ಹಣಕಾಸು ಸಂಸ್ಥೆಗಳ ಮೂಲಕ ಸಾಲವಾಗಿ ಪಡೆಯಬಹುದಾಗಿದೆ.

ಅರ್ಹತಾ ಮಾನದಂಡಗಳು ಅರ್ಜಿದಾರರು ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 3.00 ಲಕ್ಷಗಳೊಳಗಿರಬೇಕು. ವಯಸ್ಸು 21 ರಿಂದ 45 ವರ್ಷಗಳೊಳಗಿರಬೇಕು.

**ಅರ್ಜಿ ಸಲ್ಲಿಸುವ ವಿಧಾನ** : ಸೇವಾ ಸಿಂಧು ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿದಾರರು ಆಧಾರ್ ಜೋಡಣೆಗೊಂಡ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವ ಹೆಸರು, ಜಾತಿ ಮತ್ತು ಆದಾಯ ಪ್ರಮಾಣಪತ್ರ ಹಾಗೂ ಬ್ಯಾಂಕ್ ಪಾಸ್‌ಬುಕ್‌ನಲ್ಲಿರುವ ಹೆಸರು ಪರಸ್ಪರ ಹೊಂದಾಣಿಕೆಯಾಗಿರಬೇಕು. ಅರ್ಜಿ ಸಲ್ಲಿಸಲು ಮಾರ್ಚ್ 6 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ: ಜಾಲತಾಣ: http://kvcdc.karnataka.gov.in ಜಿಲ್ಲಾ ಕಚೇರಿ ದೂರವಾಣಿ: 08372–232327 ಕೇಂದ್ರ ಕಚೇರಿ: 080–29904350, 080–29904268

ವಿಳಾಸ: ರೂ. ನಂ. 202, 2ನೇ ಮಹಡಿ, ಜಿಲ್ಲಾ ಆಡಳಿತ ಭವನ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಕಚೇರಿ, ಗದಗ. ಈ ಕುರಿತು ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2ನೇ ತಾಲೂಕಾ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಕ.ಸಾ.ಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಕರೆ

# ಸಾಹಿತ್ಯ ಸಮ್ಮೇಳನವನ್ನು ಹಬ್ಬದಂತೆ ಸಂಭ್ರಮಿಸೋಣ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ 2ನೇ ಕನ್ನಡ ಸಾಹಿತ್ಯ ಸಮ್ಮೇಳನ ಇತಿಹಾಸ ಪ್ರಸಿದ್ಧ ಕೋಟೆ ಗ್ರಾಮ ಯಳವತ್ತಿಯಲ್ಲಿ ಫೆ. 14ರಂದು ಶನಿವಾರ ನಡೆಯಲಿದ್ದು, ಎಲ್ಲ ಕನ್ನಡಾಭಿಮಾನಿಗಳು ಪಾಲ್ಗೊಂಡು ಕನ್ನಡದ ಜಾತ್ರೆಯ ತೇರನ್ನು ಹಬ್ಬದ ರೀತಿಯಲ್ಲಿ ಸಂಭ್ರಮದಿಂದ ಎಳೆಯೋಣ ಎಂದು ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಕರೆ ನೀಡಿದರು.

ಅವರು ಬುಧವಾರ ತಾಲೂಕಿನ ಯಳವತ್ತಿ ಗ್ರಾಮದಲ್ಲಿ ಸಮ್ಮೇಳನ ಪೂರ್ವಭಾವಿಯಾಗಿ ನಡೆಸಿದ ಸಭೆಯಲ್ಲಿ ಮಾತನಾಡಿದರು.

ಕನ್ನಡದ ಸಾರಸ್ವತ ಲೋಕಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ. ಕಾಲಕ್ಕೆ ತಕ್ಕಂತೆ ಕನ್ನಡ ಭಾಷೆ, ನೆಲ, ಜಲಕ್ಕೆ ಒಂದಿಲ್ಲೊಂದು ಸಮಸ್ಯೆ ಉಂಟಾಗುತ್ತದೆ. ಈ ನಿಟ್ಟಿನಲ್ಲಿ ಕನ್ನಡಿಗರಲ್ಲಿ ಅಭಿಮಾನ, ಸ್ವಾಭಿಮಾನವನ್ನು ಸದಾ ಜಾಗೃತಗೊಳಿಸುವ ನಿಟ್ಟಿನಲ್ಲಿ ಕಸಾಪ ಸಮ್ಮೇಳನದ ಮೂಲಕ ಕೆಲಸ ಮಾಡುತ್ತದೆ. ಯಳವತ್ತಿ ಗ್ರಾಮ ಸಾಹಿತ್ತಿಕ, ಐತಿಹಾಸಿಕ, ಧಾರ್ಮಿಕ, ಕೃಷಿ ವಿವಿಧ ಕ್ಷೇತ್ರಗಳಲ್ಲಿ ಹೆಸರಾಗಿದೆ. ಗ್ರಾಮದಲ್ಲಿ ಯಳವತ್ತಿಯಲ್ಲಿ ಗ್ರಾಮಸ್ಥರೆಲ್ಲರೂ ಜಾತ್ಯಾತೀತ, ಪಕ್ಷಾತೀತವಾಗಿ ವೈಮನಸ್ಸು ಮರೆತು ಒಮ್ಮನಸ್ಸಿನಿಂದ ಸಾಹಿತ್ಯ ಸಮ್ಮೇಳನವನ್ನು ಹಬ್ಬದ ಸಂಭ್ರಮದಂತೆ ನೆರವೇರಿಸಲು ಕಂಕಣಬದ್ಧರಾಗಿ ಒಗ್ಗಟ್ಟಿನಿಂದ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಸಾಹಿತಿ ಲಲಿತಕ್ಕ ಕೆರಿಮನಿಯವರನ್ನು ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡುವ ಮೂಲಕ ಮಹಿಳೆಯರನ್ನು ಗುರುತಿಸಿ ಗೌರವಿಸಿರುವುದು ಸ್ವಾಗತಾರ್ಹ ಎಂದರು.



ಕೃಷಿಯನ್ನೇ ಬದುಕಾಗಿಸಿಕೊಂಡಿರುವ, ಅದರಲ್ಲೂ ಸಾವಯವ ಕೃಷಿಗೆ ಹೆಸರಾದ ಊರಲ್ಲಿ ನಡೆಯುತ್ತಿರುವ ಸಮ್ಮೇಳನದಲ್ಲಿ ಕೃಷಿ ಗೋಷ್ಠಿ, ತಾಲೂಕು ಮತ್ತು ಗ್ರಾಮ ದರ್ಶನ ಗೋಷ್ಠಿ, ಮಹಿಳಾ ಗೋಷ್ಠಿ, ಮಕ್ಕಳ ಗೋಷ್ಠಿಗಳು ನಡೆಯಲಿವೆ. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ, ಮಕ್ಕಳು ಹಾಗೂ ಕಲಾ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ, ಬಹಿರಂಗ ಅಧಿವೇಶನ, ಸಮಾರೋಪ ಸಮಾರಂಭ ನಡೆಯಲಿವೆ. ಇದೊಂದು ಮಾದರಿ ಸಮ್ಮೇಳನವಾಗುವ ನಿಟ್ಟಿನಲ್ಲಿ ಗ್ರಾಮಸ್ಥರು ಒಗ್ಗಟ್ಟಿನಿಂದ ಶ್ರಮಿಸುತ್ತಿದ್ದಾರೆ. ಕನ್ನಡ ತಾಯಿ ಭುವನೇಶ್ವರಿಯ ತೇರನು ಎಳೆಯಲು ಯಳವತ್ತಿ ಗ್ರಾಮ ಸಂಪೂರ್ಣ ಸಜ್ಜಾಗಿದ್ದು, ಎಲ್ಲರೂ ಸೇರಿ ಒಂದಾಗಿ–ಚಂದಾಗಿ ಸಮ್ಮೇಳನ ಯಶಸ್ವಿಗೊಳಿಸೋಣ.

> ಕಸಾಪ ಕಾರ್ಯಕಾರಿ ಸದಸ್ಯ ಬಾಪೂಗೌಡ್ರ ಭರಮಗೌಡ್ರ ಮಾತನಾಡಿ, ಗ್ರಾಮದ ಕೋಟೆ ಆವರಣದಲ್ಲಿ ಸಮ್ಮೇಳನದ ವೇದಿಕೆ ಸಿದ್ಧಪಡಿಸಲಾಗಿದೆ. ಬೆಳಿಗ್ಗೆ 8ಕ್ಕೆ ಧ್ವಜಾರೋಹಣ ನಡೆಯಲಿದ್ದು, 9 ಗಂಟೆಗೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ವೇದಿಕೆಯವರೆಗೂ ಭುವನೇಶ್ವರಿ ತಾಯಿ ಭಾವಚಿತ್ರದೊಂದಿಗೆ ಸಮ್ಮೇಳನದ ಸರ್ವಾಧ್ಯಕ್ಷರ ಮೆರವಣಿಗೆ, ರೂಪಕಗಳು, ಪೂರ್ಣಕುಂಭ, ವಾದ್ಯವೈಭವಗಳೊಂದಿಗೆ ನೆರವೇರಲಿದೆ. ಮೆರವಣಿಗೆ ಮಾರ್ಗದಲ್ಲಿ ತಳಿರು–ತೋರಣ ಕಟ್ಟಿ, ರಂಗೋಲಿ ಹಾಕಿ ಸ್ವಾಗತಿಸಲಾಗುತ್ತದೆ. ಸಮ್ಮೇಳನದಲ್ಲಿ ಮಠಾಧೀಶರು, ಸಚಿವರು, ಶಾಸಕರು, ಅಧಿಕಾರಿಗಳು, ಸಾಹಿತಿಗಳು ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಲಿದ್ದಾರೆ. ಅದಕ್ಕಾಗಿ 2–3 ಸಾವಿರ ಜನರಿಗೆ ಆಸನಗಳು, ಶಾಲಾ ಆವರಣದಲ್ಲಿ ಊಟ, ಕುಡಿಯುವ ನೀರು, ಪಾರ್ಕಿಂಗ್ ಸೇರಿ ಅಗತ್ಯ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಆ ಮೂಲಕ ಯಳವತ್ತಿ ಗ್ರಾಮದ ಹಿರಿಮೆ–ಗರಿಮೆಯನ್ನು ನಾಡಿಗೆ ಪಸರಿಸೋಣ ಎಂದರು.

ಈ ವೇಳೆ ಹಿರಿಯರಾದ ವಿ.ಎಂ. ಮೇಟಿ, ಶಿವಪ್ಪ ಗಾಣಗೇರ, ಬಸವೆಣೆಪ್ಪ ಚಿಣಗಿ, ಸಿದ್ದಪ್ಪ ಜವಳಿ, ಈರಯ್ಯ ಮಠಪತಿ, ಫಕ್ಕೀರಗೌಡ ಪಾಟೀಲ, ಡಾ. ಎಸ್.ಕೆ. ಪಾಟೀಲ, ರಾಜನಗೌಡ್ರ ಅಜ್ಜನಗೌಡ್ರ, ಮೈನು ಗಮ್ಮಣ್ಣವರ, ಮುತ್ತಣ್ಣ ನವಲಗುಂದ, ಮಲ್ಲನಗೌಡ ಪಾಟೀಲ, ಮಂಜುನಾಥ ಚಾಕಲಬ್ಬಿ, ಎಸ್.ಬಿ. ಅಣ್ಣಿಗೇರಿ, ಎಸ್.ಎಫ್. ಕೊಡ್ಲಿ, ಎಸ್.ಎನ್. ಮಳಲಿ, ಗೀತಾ ಸುರೇಶ ಭೀರಣ್ಣವರ, ನಿರ್ಮಲಾ ಗಣಾಚಾರಿ, ಪ್ರಿಯಾಂಕಾ ಶಿರಬಡಗಿ, ಶಿವಯೋಗಿ ಹೊಸಕೇರಿ, ಸಮ್ಮೇಳನದ ವಿವಿಧ ಸಮಿತಿಗಳು, ಕಸಾಪ ಪದಾಧಿಕಾರಿಗಳು, ಸದಸ್ಯರು ಹಾಗೂ ಯಳವತ್ತಿ ಗ್ರಾಮಸ್ಥರ ಪೂರ್ವಭಾವಿ ಗ್ರಾಮಸ್ಥರು ಇದ್ದರು.

# ಪಂ. ದೀನದಯಾಳ್‌ರ ದೇಶಪ್ರೇಮ ಅನುಪಮ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಪ್ಪಟ ದೇಶಭಕ್ತ, ಚಿಂತಕ, ಜನಸಂಘದ ನಾಯಕ ಪಂ. ದೀನದಯಾಳ್ ಉಪಾಧ್ಯಾಯರ ಸಮರ್ಪಣಾ ದಿನದ ಅಂಗವಾಗಿ ಪಟ್ಟಣದಲ್ಲಿ ಮಂಗಳವಾರ ಅವರ ಭಾವಚಿತ್ರಕ್ಕೆ ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ಪಕ್ಷದ ಮುಖಂಡರು ಪುಷ್ಪ ನಮನ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ದೇಶದ ಹಿತ ಚಿಂತಕರು, ತ್ಯಾಗ ಜೀವಿಗಳು, ಜನಸಂಘದ ನಾಯಕರಾಗಿದ್ದ ಇವರು ಭಾಜಪ ಪಕ್ಷವನ್ನು ಕಟ್ಟಿ ಬೆಳೆಸುವಲ್ಲಿ ಶ್ರಮಿಸಿದ್ದಾರೆ. ಅವರ ಸಂಘಟನಾ ಶಕ್ತಿ, ವ್ಯಕ್ತಿತ್ವ, ನಿಷ್ಠೆ ಮತ್ತು ಪ್ರಾಮಾಣಿಕ ಪ್ರಯತ್ನದಿಂದಾಗಿ ಇಂದು ಬಿಜೆಪಿ ಹೆಮ್ಮರವಾಗಿದೆ. ರಾಷ್ಟ್ರಭಕ್ತ, ತತ್ವಜ್ಞಾನಿ, ಪತ್ರಕರ್ತ, ಮೇಧಾವಿ ಲೇಖಕರಾಗಿ ಸಾಕಷ್ಟು ಕೆಲಸ ಮಾಡಿದ್ದಾರೆ. ರಾಷ್ಟ್ರಕ್ಕಾಗಿ ಜೀವನವನ್ನೇ ಮುಡಿಪಾಗಿಟ್ಟ ಅವರ ಶಿಸ್ತಿನ ಜೀವನ, ದೇಶಪ್ರೇಮ, ತತ್ವ–ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದರು.

ಈ ವೇಳೆ ಶಿರಹಟ್ಟಿ ಮಂಡಲದ ಪ್ರ.ಕಾರ್ಯದರ್ಶಿ ಗಂಗಾಧರ ಮೆಣಸಿನಕಾಯಿ, ನಿಂಗಪ್ಪ ಬನ್ನಿ, ಎಂ.ಆರ್. ಪಾಟೀಲ, ಅನಿಲ ಮುಳಗುಂದ, ಮಹಾದೇವಪ್ಪ ಅಣ್ಣಿಗೇರಿ, ವಿಜಯ ಹತ್ತಿಕಾಳ, ರುದ್ರಪ್ಪ ಉಮಚಗಿ, ಪ್ರವೀಣ ಬೋಮಲೆ, ದುಂಡೇಶ ಕೊಟಗಿ, ಹಾಲಪ್ಪ ಸೂರಣಗಿ, ಬಸವರಾಜ ಕಲ್ಲೂರ, ಸಂಗಮೇಶ ಬೆಳವಲಕೊಪ್ಪ, ವಿಜಯ ಕುಂಬಾರ, ವಿಜಯ ಬೂದಿಹಾಳ, ಸಂತೋಷ ಜಾವೂರ, ಉಳವೇಶಗೌಡ ಪಾಟೀಲ, ಸತೀಶ ಕಾಡಣ್ಣವರ, ವಿಶಾಲ ಬಟಗುರ್ಕಿ ಸೇರಿ ಬಿಜೆಪಿ ಕಾರ್ಯಕರ್ತರು ಇದ್ದರು.

### 2ನೇ ಹಂತದ ಹೆಚ್‌ಪಿವ್ಹಿ ಲಸಿಕೆ ವಿತರಣೆಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಹೆಚ್‌ಪಿವ್ಹಿ ಲಸಿಕೆಯಿಂದ ಅಡ್ಡ ಪರಿಣಾಮವಿಲ್ಲ

**■ ವಿಜಯಸಾಕ್ಷಿ ಸುದ್ದಿ, ರೋಣ**

ಮಹಿಳೆಯರ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಹೆಚ್‌ಪಿವ್ಹಿ ಲಸಿಕೆ ರಾಮಬಾಣವಾಗಿದ್ದು, ವಿದ್ಯಾರ್ಥಿನಿಯರು ಲಸಿಕೆಯಿಂದಾಗುವ ಆರೋಗ್ಯದ ಲಾಭವನ್ನು ಪಡೆದುಕೊಳ್ಳಬೇಕು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ಪಟ್ಟಣದ ಗುರುಭವನದಲ್ಲಿ ರಾಜ್ಯ ಖನಿಜ ಅಭಿವೃದ್ಧಿ ನಿಗಮ, ಜಿಲ್ಲಾ ಆರೋಗ್ಯ ಹಾಗೂ ಶಿಕ್ಷಣ ಇಲಾಖೆ, ಎಸ್. ಆರ್. ಪಾಟೀಲ ಪ್ರತಿಷ್ಠಾನ, ರಾಜೀವಗಾಂಧಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಪ್ರಾಜೆಕ್ಟ್ ಶೀಲ್ಡ್‌ರವರ ಆಶ್ರಯದಲ್ಲಿ ಜರುಗಿದ ಹೆಚ್.ಪಿ.ವ್ಹಿ 2ನೇ ಹಂತದ ಉಚಿತ ಲಸಿಕೆ ವಿತರಣಾ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಹೆಚ್.ಪಿ.ವ್ಹಿ ಲಸಿಕೆಯನ್ನು ಮೊದಲು ನಾನು ನಮ್ಮ ಮೊಮ್ಮಕ್ಕಳ ಮೇಲೆ ಪ್ರಯೋಗ ಮಾಡಿಸಿದ್ದೇನೆ. ಅವರ ಮೇಲೆ ಯಾವುದೇ ರೀತಿಯ ಅಡ್ಡ ಪರಿಣಾಮ ಆಗದಿದ್ದಲ್ಲಿ ಮಾತ್ರ ಬೇರೆ ಹೆಣ್ಣು ಮಕ್ಕಳಿಗೆ ಉಚಿತವಾಗಿ ವಿತರಿಸುವಂತೆ ತಿಳಿಸಿದೆ. ಇಂತಹ ಮಹತ್ವದ ಕಾರ್ಯಕ್ಕೆ ಶಿಕ್ಷಣ, ಆರೋಗ್ಯ ಇಲಾಖೆಗಳು ಸಂಪೂರ್ಣವಾಗಿ ಪ್ರೋತ್ಸಾಹಿಸಿದ್ದು ಸ್ವಾಗತಾರ್ಹವಾಗಿದೆ ಎಂದರು. ಮತಕ್ಷೇತ್ರದಲ್ಲಿನ ಎಲ್ಲ ಸರಕಾರಿ ಶಾಲೆಗಳ ಹೆಣ್ಣು ಮಕ್ಕಳಿಗೆ ಉಚಿತವಾಗಿ ಲಸಿಕೆಯನ್ನು ನೀಡಲು ಈಗಾಗಲೇ ಸೂಚಿಸಿದ್ದೇನೆ. ಮುಖ್ಯವಾಗಿ ಹೆಣ್ಣು ಮಕ್ಕಳ ಪಾಲಕರು ಲಸಿಕೆ ಪಡೆಯುವಂತೆ ತಮ್ಮ ಮಕ್ಕಳನ್ನು ಪ್ರೋತ್ಸಾಹಿಸಬೇಕು. ಕಾರಣ ಹೆಣ್ಣು ಮಕ್ಕಳ ಆರೋಗ್ಯವನ್ನು ಸದೃಢಗೊಳಿಸಲು ಹೆಚ್.ಪಿ.ವ್ಹಿ ಲಸಿಕೆ ಅಸ್ತ್ರವಾಗಿದ್ದು, ಗರ್ಭಕಂಠದ ಕ್ಯಾನ್ಸರ್‌ನ್ನು ತಡೆಗಟ್ಟಬಹುದು. ಮುಂದಿನ ದಿನಗಳಲ್ಲಿ ಕ್ಷೇತ್ರದಲ್ಲಿನ ಖಾಸಗಿ ಶಾಲೆಗಳ ಹೆಣ್ಣು ಮಕ್ಕಳಿಗೂ ಹೆಚ್.ಪಿ.ವ್ಹಿ ಲಸಿಕೆಯನ್ನು ವಿತರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

> ಹೆಚ್.ಪಿ.ವ್ಹಿ ಲಸಿಕೆಯನ್ನು ಮೊದಲ ಹಂತದಲ್ಲಿ 864 ಹೆಣ್ಣು ಮಕ್ಕಳಿಗೆ ವಿತರಣೆ ಮಾಡಲಾಗಿದೆ. ಈಗ ಮೊದಲ ಲಸಿಕೆಯನ್ನು ಪಡೆದಿರುವ ಎಲ್ಲ 864 ಮಕ್ಕಳಿಗೂ ಎರಡನೆ ಲಸಿಕೆಯನ್ನು ವಿತರಿಸಲಾಗುತ್ತಿದೆ. ಯಾವ ಹೆಣ್ಣು ಮಕ್ಕಳ ಆರೋಗ್ಯದ ಮೇಳೆಯೂ ಲಸಿಕೆ ಕೆಟ್ಟ ಪರಿಣಾಮ ಬೀರಿಲ್ಲ ಎನ್ನುವುದಕ್ಕೆ ಈ ಕಾರ್ಯಕ್ರಮವೇ ಸಾಕ್ಷಿಯಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

ಆರೋಗ್ಯ ಇಲಾಖೆಯ ಕೆ.ಎಲ್. ಹಾದಿಮನಿ ಹೆಚ್.ಪಿ.ವ್ಹಿ ಲಸಿಕೆಯಿಂದಾಗುವ ಲಾಭದ ಕುರಿತು ಉಪನ್ಯಾಸ ನೀಡಿದರು. ಟಿ.ಈಶ್ವರ, ಐ.ಎಸ್. ಪಾಟೀಲ, ವಿ.ಆರ್. ಗುಡಿಸಾಗರ, ಬಿಇಓ ಎ.ಎನ್. ಕಂಬೋಗಿ, ಡಾ. ಶಕೀಲಹ್ಮದ ದುಂದರಗಿ, ಡಾ. ಬಿ.ಎಸ್. ಭಜಂತ್ರಿ, ಡಾ. ಎಲ್.ಡಿ. ಬಾಕಳೆ, ಬಸವರಾಜ ನವಲಗುಂದ, ಯೂಸುಫ್ ಇಟಗಿ, ಸಂಜಯ ದೊಡ್ಡಮನಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

# ಸಮಯ ಪರಿಪಾಲನೆ ಅವಶ್ಯ



**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಮಯ ಹಾಗೂ ಕರ್ತವ್ಯ ಪರಿಪಾಲನೆ ಪ್ರತಿಯೊಬ್ಬ ಶಿಕ್ಷಕರ ಗುರಿಯಾಗಿರಬೇಕು ಎಂದು ಶಾಲಾ ಪ್ರಧಾನ ಗುರು ಎಸ್. ಎಸ್. ಅರಹುಣಸಿ ಹೇಳಿದರು.

ಅವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ (ಡಿಪಿಇಪಿ) ಶಾಲೆಯ ನೂತನ ಪ್ರಧಾನ ಗುರುಗಳಾಗಿ ಹುದ್ದೆ ಅಲಂಕರಿಸಿ ಮಾತನಾಡಿ, ಯಾವ ಶಿಕ್ಷಕರು ಸಮಯ ಹಾಗೂ ಕರ್ತವ್ಯವನ್ನು ಸರಿಯಾಗಿ ಪರಿಪಾಲಿಸುತ್ತಾರೆಯೋ, ಆ ಶಾಲಾ ಅಭಿವೃದ್ಧಿ ಹೊಂದುತ್ತದೆ. ಪ್ರತಿಯೊಬ್ಬ ಶಿಕ್ಷರು ಇದನ್ನು ಪರಿಪಾಲಿಸಿ ನಡೆದಾಗ ಮಕ್ಕಳು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಆ ನಿಟ್ಟಿನಲ್ಲಿ ನಾವೆಲ್ಲರೂ ಕಾಯಕ ಮಾಡೋಣ ಎಂದರು.

ಶಿಕ್ಷಕ ಬಸವರಾಜ ಹೊಂಬಳ ಮಾತನಾಡಿ, ಶಿಕ್ಷಣ ಅಭಿವೃದ್ಧಿಗೆ, ಮಕ್ಕಳ ಪ್ರಗತಿಗೆ ಪಟ್ಟಣದ ಗುರು–ಹಿರಿಯರು ಸಹಾಯ–ಸಹಕಾರ ನೀಡುತ್ತಿರುವುದರಿಂದ ಸರಕಾರಿ ಶಾಲೆಗಳು ಪ್ರಗತಿಯಲ್ಲಿ ಸಾಗುತ್ತಿವೆ ಎಂದರು. ಎಸ್‌ಡಿಎಂಸಿ ಅಧ್ಯಕ್ಷ ಸೈಯದಬಾಷಾ ಮಕಾಂದಾರ, ಯು.ಐ. ಭಜಂತ್ರಿ, ಜಿ.ಆರ್. ಹಲಗೇರಿ, ವಿ.ವಿ. ಕರಿಗಾರ, ಆರೀಫ್ ಶಿರಹಟ್ಟಿ, ಬಸವರಾಜ ಹೊಂಬಳ, ಕೆ.ಡಿ. ತಳವಾರ, ಎಸ್.ಪಿ. ಕುರಿ, ಎಂ.ಆರ್. ಕಲಗುಡಿ, ಎಸ್.ವಿ. ಲಾಂಡೆ, ಯು.ಎಂ. ಗೊರಜನಾಳ, ಎಸ್.ಎಂ. ಹುಲಗೂರ, ಪಿ.ಬಿ. ಕೆಂಚನಗೌಡರ ಮುಂತಾದವರಿದ್ದರು.

# ಆತಂಕ ಸೃಷ್ಟಿಸಿದ ಆಕಸ್ಮಿಕ ಬೆಂಕಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಕೊಂಡಿಕೊಪ್ಪ ಗ್ರಾಮದ ಹೊರವಲಯದ ಜಮೀನಿನಲ್ಲಿ ಬುಧವಾರ ಮಧ್ಯಾಹ್ನ ಆಕಸ್ಮಿಕವಾಗಿ ಬೆಂಕಿ ಹೊತ್ತಿಕೊಂಡು ಒಕ್ಕಲಿಯಾದ ಸುಮಾರು 10ರಿಂದ 12 ಎಕರೆ ಜಮೀನಿನಲ್ಲಿ ಬೆಂಕಿ ಆವರಿಸಿಕೊಂಡು ಆತಂಕ ಸೃಷ್ಟಿಸಿದೆ.

ಕೂಡಲೇ ಸುತ್ತಮುತ್ತಲಿನ ರೈತರು ಬೆಂಕಿ ಆವರಿಸದಂತೆ ಕಾರ್ಯಪ್ರವೃತ್ತರಾಗಿದ್ದಾರೆ. ವಿಷಯ ತಿಳಯುತ್ತಿದ್ದಂತೆಯೇ ದೌಡಾಯಿಸಿದ ಅಗ್ನಿಶಾಮಕ ದಳದ ಸಿಬ್ಬಂದಿಗಳು ಬೆಂಕಿ ನಂದಿಸುವ ಕಾರ್ಯ ಮಾಡಿ ಸುತ್ತಲಿನ ಜಮೀನುಗಳಿಗೆ ಹಾನಿಯಾಗುವುದನ್ನು ತಪ್ಪಿಸಿದ್ದಾರೆ.

ಈ ವೇಳೆ ಸೇರಿದ್ದ ರೈತರಿಗೆ ಅಗ್ನಿ ಶಾಮಕ ಠಾಣಾಧಿಕಾರಿ ಬಿ.ಎಂ. ಮರಟಗೇರಿ ತಿಳುವಳಿಕೆ ನೀಡಿದರು. ಬೇಸಿಗೆ ಕಾಲ ಆರಂಭವಾಗುತ್ತಿದ್ದು, ಬೆಂಕಿ ಅವಘಡಗಳು ಹೆಚ್ಚುತ್ತವೆ. ರೈತರು ಹೊಲದಲ್ಲಿನ ಮತ್ತು ಬದುವಿನಲ್ಲಿನ ಕಸ ಸುಡಲು ಹಚ್ಚುವ ಬೆಂಕಿ ರಸ್ತೆ ಬದಿಯ ಗಿಡ ಮರಗಳನ್ನು, ಪ್ರಾಣಿ–ಪಕ್ಷಿ, ಜೀವ ಸಂಕುಲವನ್ನು ಸುಡುತ್ತವೆ. ಅಲ್ಲದೇ ಮೆಕ್ಕೆಜೋಳ, ಕಡಲೆ, ಕುಸುಬೆ ಕಟಾವು, ಒಕ್ಕಲಿ ನಂತರ ಜಮೀನಿನಲ್ಲಿ ಒಣಗಿದ ಹೊಟ್ಟು ಹೆಚ್ಚಿರುತ್ತದೆ. ಇದು ಬೆಂಕಿ ಆರಿಸಲು ಸಾಧ್ಯವಾಗದಂತೆ ಆವರಿಸುತ್ತದೆ. ಆದ್ದರಿಂದ ರೈತರು ಮುಂಜಾಗೃತಾ ಕ್ರಮ ಕೈಗೊಳ್ಳಬೇಕು. ಅವಘಡ ನಡೆದಲ್ಲಿ ಕೂಡಲೇ ಅಗ್ನಿಶಾಮಕ ಠಾಣೆಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಸಿಬ್ಬಂದಿಗಳಾದ ಜಗದೀಶ ತಳವಾರ, ಬಾಬಣ್ಣ ಲಮಾಣಿ, ಕೃಷ್ಣ ರಾಠೋಡ ಮತ್ತಿತರರಿದ್ದರು.



# ಜಿಲ್ಲಾ ಮಟ್ಟದ ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮ



**■ ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಹಾಗೂ ನೌಕರರ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಹಿತದೃಷ್ಟಿಯಿಂದ ವಿಭಾಗ ಮಟ್ಟದ ಅಧಿಕಾರಿಗಳು ನೌಕರರಿಗೆ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಲಕ್ಕುಂಡಿಯ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯಲ್ಲಿ ಬುಧವಾರ ನಡೆಯಿತು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹಣಬರಟ್ಟಿ, ಪೊಲೀಸ್ ಉಪಾಧೀಕ್ಷಕ ವಿದ್ಯಾನಂದ ನಾಯಕ, ಜಿ.ಪಂ ಯೋಜನಾ ನಿರ್ದೇಶಕ ಎಮ್.ವಿ. ಚಳಗೇರಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಉದ್ಘಾಟಿಸಿದರು.

ಪತ್ರಾಂಕಿತ ವ್ಯವಸ್ಥಾಪಕರಾದ ಮಂಜುಳಾ ಸೋಮಕ್ಕನವರ, ಸಹಾಯಕ ನಿರ್ದೇಶಕರಾದ ಗೋಪಾಲ ಲಮಾಣಿ, ಬಿ.ಎಮ್. ಬಡಿಗೇರ, ಉದಯಕುಮಾರ ಎಲಿವಾಳ, ಗೀತಾ ಆಲೂರು, ಪ್ರಾಂಶುಪಾಲರಾದ ವೈಶಾಲಿ ಸೊಲ್ಲಾಪೂರ, ಲೆಕ್ಕ ಅಧೀಕ್ಷಕ ಗೋಪಾಲ ಲಮಾಣಿ, ಮಂಜುಳಾ ಎನ್, ವಿದ್ಯಾವತಿ ಕುರಹಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಎಲ್ಲ ಸಿಬ್ಬಂದಿಗಳು, ಕ್ರೈಸ್ ವಸತಿ ಶಾಲೆಗಳ ಎಲ್ಲ ಪ್ರಾಂಶುಪಾಲರು, ದೈಹಿಕ ಶಿಕ್ಷಕರು, ಚಿತ್ರಕಲಾ ಶಿಕ್ಷಕರು, ಸಂಗೀತ ಶಿಕ್ಷಕರು ಭಾಗವಹಿಸಿದ್ದರು.

# ಫೆ.17 ರಂದು ಗದಗ ಜಿಲ್ಲಾ ಯೋಜನಾ ಸಮಿತಿ ಸಭೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಫೆಬ್ರುವರಿ 17ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಯೋಜನಾ ಸಮಿತಿ ಸಭೆ ನಡೆಯಲಿದೆ.

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಗದಗ ಜಿಲ್ಲಾ ಯೋಜನಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ಈ ವಿಷಯವನ್ನು ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka